ಕನ್ನಡಪ್ರಭ
ಶನಿವಾರ 9.05.2026

ಗರಿಷ್ಠ 32°C | ಕನಿಷ್ಠ 21°C

ಸುದ್ದಿ ಸಿಂಚನ

ಬಿರುಗಾಳಿ, ಗುಡುಗು, ಮಿಂಚು ಸಹಿತ ಮಳೆ

ಹನೂರು: ತಾಲೂಕಿನ ಹೊಸಪಾಳ್ಯ, ಆರೇಪಾಳ್ಯ, ಹುಣಸೇಪಾಳ್ಯ, ಬೈಲೂರು, ಅರ್ಧನಾರಿಪುರ ಸೇರಿದಂತೆ ಹಲವೆಡೆ ಶುಕ್ರವಾರ ಮಧ್ಯಾಹ್ನ ಸುಮಾರು 3 ಗಂಟೆಯ ವೇಳೆಗೆ ಏಕಾಏಕಿ ಬಿರುಗಾಳಿ, ಗುಡುಗು, ಮಿಂಚು ಸಹಿತ ಮಳೆ ಸುರಿಯಿತು. ಹಲವಾರು ದಿನಗಳಿಂದ ಬೇಸಿಗೆಯ ಬಿಸಿಲಿನಿಂದ ಬೆಂಡಾಗಿದ್ದ ರೈತರು ಹಾಗೂ ಗ್ರಾಮಸ್ಥರು ಈ ಮಳೆಯಿಂದ ತಾತ್ಕಾಲಿಕ ಸಂತೋಷ ಅನುಭವಿಸಿದರು. ಮಳೆಯು ಕೃಷಿ ಪ್ರದೇಶಗಳಿಗೆ ಅಗತ್ಯ ನೀರನ್ನು ಒದಗಿಸಿದ್ದು, ವ್ಯವಸಾಯ ಮಾಡಲು ಸಹಾಯ ಮಾಡಿದೆ ಎಂದರು ಕೃಷಿಕ ರೈತರು ಹರ್ಷ ವ್ಯಕ್ತಪಡಿಸಿದ್ದಾರೆ.

ಹನೂರಿನ ಹಾಡಿಗಳಲ್ಲಿ ಒಂಟಿ ಸಲಗದ ಉಪಟಳ

ಹನೂರು: ತಾಲೂಕಿನ ಮಲೆ ಮಹದೇಶ್ವರ ಬೆಟ್ಟ ಗ್ರಾಮ ಪಂಚಾಯ್ತಿ ವ್ಯಾಪ್ತಿಯ ಇಂಡಿಗನತ್ತ ಗ್ರಾಮದ ಬಳಿ ಬರುವ ಬುಡಕಟ್ಟು ಸೋಲಿಗ ಸಮುದಾಯವೇ ವಾಸಿಸುವ ಹನಗಾಡು ಗ್ರಾಮದ ಬಳಿ ದಿನನಿತ್ಯ ಒಂಟಿಸಲಗ ಉಪಟಳ ನೀಡುತ್ತಿದ್ದು ಗ್ರಾಮದ ಬಳಿ ಬರುವ ಹಲಸಿನ ಮರ ಸೇರಿದಂತೆ ವಿವಿಧ ಮರಗಳನ್ನು ತಿಂದು ನಾಶಪಡಿಸುತ್ತಿರುವ ಬಗ್ಗೆ ಗ್ರಾಮಸ್ಥರು ಆತಂಕ ವ್ಯಕ್ತಪಡಿಸಿದ್ದಾರೆ. ದಿನನಿತ್ಯ ಬರುತ್ತಿರುವ ಕಾಡಾನೆಯಿಂದ ನಿವಾಸಿಗಳು ಗ್ರಾಮದ ಬಳಿ ಆನೆ ಬರುತ್ತಿರುವುದರಿಂದ ವಯೋವೃದ್ಧರು ಸಣ್ಣ ಮಕ್ಕಳು ಭಯಭೀತರಾಗಿದ್ದು, ಅನಾಹುತಗಳು ಸಂಭವಿಸುವ ಮುನ್ನ ಅರಣ್ಯ ಇಲಾಖೆ ಕಾಡಾನೆಯನ್ನು ಹಿಡಿದು ಬೇರೆಡೆ ಬಿಡುವಂತೆ ಕ್ರಮ ಕೈಗೊಳ್ಳಬೇಕು ಎಂದು ಗ್ರಾಮದ ಮುಖಂಡರಾದ ಮಣಿ ಸೇರಿದಂತೆ ನಿವಾಸಿಗಳು ಒತ್ತಾಯಿಸಿದ್ದಾರೆ.

ನೀರುಗಂಟಿಗಳ ಪ್ರತಿಭಟನೆ ಇಲ್ಲ: ಪೂರೈಕೆ ಅಭಾದಿತ

ಕೊಳ್ಳೇಗಾಲ: ನಗರಸಭೆ ನೀರು ಸರಬರಾಜು ಹೊರಗುತ್ತಿಗೆ ನೌಕರರು ಗುರುವಾರ ಕೈಗೊಂಡಿದ್ದ ನಿರ್ಧಾರವನ್ನು ಹಿಂಪಡೆಯುವ ಮೂಲಕ ಸಾರ್ವಜನಿಕರಿಗೆ ತೊಂದರೆಯಾಗದಂತೆ ಎಂದಿನಂತೆ ನೀರು ಸರಬರಾಜು ಮಾಡಲಾಗುವುದು ಎಂದು ಸಂಘದ ಅಧ್ಯಕ್ಷ ಪುಟ್ಟಮಾದು ತಿಳಿಸಿದ್ದಾರೆ. ನಗರಸಭೆ ಕಾರ್ಯಾಲಯಕ್ಕೆ ಪೌರಾಯುಕ್ತರು ಎಲ್ಲಾ ವಾಟರ್ ಮ್ಯಾನ್‌ಗಳನ್ನು ಕರೆಯಿಸಿ, ನಿಮಗೆ ಬಾಕಿಯಿರುವ ವೇತನವನ್ನು ಶೀಘ್ರದಲ್ಲೇ ಕೊಡಿಸುವ ಭರವಸೆ ಮೇರೆಗೆ ಸಾರ್ವಜನಿಕರಲ್ಲಿ ಈ ಮೂಲಕ ಕ್ಷಮೆಯಾಚಿಸುತ್ತಾ ನಮ್ಮ ಸಂಘದ ವಾಟರ್ ಮ್ಯಾನ್‌ಗಳು ಎಂದಿನಂತೆ ನೀರು ಸರಬರಾಜು ಕೆಲಸ ಮಾಡಲಿದ್ದಾರೆ ಎಂದು ತಿಳಿಸಿದರು.

ಟ್ಯಾಕ್ಸ್ ನಾಗಣ್ಣ ನಿಧನ

ಗುಂಡ್ಲುಪೇಟೆ: ತಾಲೂಕಿನ ಬೇಗೂರು ಗ್ರಾಮದ ದಾಸ ಬಣಜಿಗ ಸಮಾಜದ ಮುಖಂಡ ಹಾಗೂ ವಾಣಿಜ್ಯ



ತೆರಿಗೆ ಇಲಾಖೆಯ ನಿವೃತ್ತ ನೌಕರ ಬಿ.ವಿ. ನಾಗರಾಜ ಶೆಟ್ಟಿ (ಟ್ಯಾಕ್ಸ್ ನಾಗಣ್ಣ) (67) ಗುರುವಾರ ರಾತ್ರಿ ನಿಧನರಾದರು. ಮೃತರು ಪತ್ನಿ ಮಂಜುಳ, ಪುತ್ರ ಗ್ರಾಪಂ ಮಾಜಿ ಸದಸ್ಯ ಬಿ.ಎನ್. ಪುನೀತ್ ಕುಮಾರ್, ಪುತ್ರಿಯರಾದ ಪೂರ್ಣಿಮ, ಆಶಾ ರಾಣಿ, ಸೊಸೆ ಧನುಶ್ರೀ ಹಾಗೂ ಸಂಬಂಧಿ ಮಹೇಶ್‌ರನ್ನು ಅಗಲಿದ್ದಾರೆ. ಅಂತ್ಯ ಸಂಸ್ಕಾರ ಬೇಗೂರುರಿನಲ್ಲಿ ಶುಕ್ರವಾರ ಮಧ್ಯಾಹ್ನ ನೆರವೇರಿತು.

ಶಾಸಕ ಸಂತಾಪ: ಬಿ.ವಿ. ನಾಗರಾಜ ಶೆಟ್ಟಿ ನಿಧನಕ್ಕೆ ಶಾಸಕ ಎಚ್.ಎಂ. ಗಣೇಶ್ ಪ್ರಸಾದ್, ಜಿಲ್ಲಾ ಸಹಕಾರ ಒಕ್ಕೂಟದ ಅಧ್ಯಕ್ಷ ಎಚ್.ಎಸ್. ನಂಜುಂಡ ಪ್ರಸಾದ್, ಜಿಪಂ ಮಾಜಿ ಉಪಾಧ್ಯಕ್ಷ ಕೆ.ಎಸ್. ಮಹೇಶ, ಪುರಸಭೆ ನಿಕಟ ಪೂರ್ವ ಅಧ್ಯಕ್ಷ ಶಶಿಧರ್ ಪಿ ದೀಪು, ಹಾಪ್ ಕಾಮ್ಸ್ ಅಧ್ಯಕ್ಷ ಎಂ. ನಾಗೇಶ್, ತಾಪಂ ಮಾಜಿ ಅಧ್ಯಕ್ಷ ಎಸ್.ಎಸ್. ಮಧುಶಂಕರ್, ಕೋಟೆಕೆರೆ ಪ್ಯಾಕ್ಸ್ ಮಾಜಿ ಅಧ್ಯಕ್ಷ ಎಲ್ಐಸಿ ಗುರು, ಗ್ರಾಮದ ಗೌಡಿಕೆ ಸೋಮಣ್ಣ, ಬಡ್ಡಿನಾಗಪ್ಪ, ಆದರ್ಶ, ಚಂದ್ರು, ಸುರೇಶ್, ಸದಾಶಿವಮೂರ್ತಿ, ನಾರಾಯಣ, ಎ.ರವಿ, ಮಂಜುನಾಥ್ ಸಂತಾಪ ಸೂಚಿಸಿದ್ದಾರೆ.



ಗುಂಡ್ಲುಪೇಟೆ ತಾಲೂಕಿನ ಚಿಕ್ಕಾಟಿ ಗ್ರಾಮದ ಹುಚ್ಚಮ್ಮ ತಾಯಿ ಗುಡಿ ಉದ್ಘಾಟನೆಗೆ ಆಗಮಿಸಿದ್ದ ಶಾಸಕ ಎಚ್.ಎಂ. ಗಣೇಶ್ ಪ್ರಸಾದ್‌ರಿಗೆ ತಾಪಂ ಮಾಜಿ ಉಪಾಧ್ಯಕ್ಷ ಬಂಗಾರನಾಯಕ, ಯಜಮಾನರಾದ ಮಹದೇವನಾಯಕ, ಸುಂದರನಾಯಕ, ಚಂದ್ರಶೇಖರ್ ಹಾಗೂ ಯುವಕರು ಬರಮಾಡಿಕೊಂಡರು.



ಚಾಮರಾಜನಗರ ಜಿಲ್ಲೆಯ ಹನೂರು ತಾಲೂಕಿನಲ್ಲಿ ಶುಕ್ರವಾರ ಮಧ್ಯಾಹ್ನ 3 ಗಂಟೆಗಳಿಂದ ಭಾರಿ ಮಳೆಯಾಗಿದ್ದು, ರೈತರ ಮುಖದಲ್ಲಿ ಸಂತಸ ತರಿಸಿದೆ. ಬೇಸಿಗೆಯಿಂದ ಬಳಲಿದ್ದ ಭೂದೇವಿಗೆ ವರ್ಷಧಾರೆ ತಂಪೆರೆದಿದೆ. ಮಳೆಯಿಂದಾಗಿ ಬತ್ತಿದ್ದ ಬಾವಿಗಳು ಮತ್ತೆ ಜೀವಕಳೆ ಪಡೆದಿವೆ.

ಹೊರೆಯಾಲದಲ್ಲಿ ಇಂದು ಸ್ವಾಗತ ಕಮಾನಿಗೆ ಶಂಕು

ಗುಂಡ್ಲುಪೇಟೆ: ತಾಲೂಕಿನ ಹೊರೆಯಾಲ ಗ್ರಾಮದಲ್ಲಿ ಮೇ 9ರ ಶನಿವಾರ ಬೆಳಗ್ಗೆ 10 ಗಂಟೆಗೆ ಬುದ್ಧ, ಬಸವ, ಅಂಬೇಡ್ಕರ್ ಮತ್ತು ವಾಲ್ಮೀಕಿಯ ಸ್ವಾಗತ ಗೋಪುರ ನಿರ್ಮಾಣಕ್ಕೆ ಭೂಮಿ ಪೂಜೆ ನಡೆಯಲಿದೆ. ಬುದ್ಧ, ಬಸವ, ಅಂಬೇಡ್ಕರ್ ಹಾಗೂ ವಾಲ್ಮೀಕಿ ಸ್ವಾಗತ ಕಮಾನಿಗೆ ಭೂಮಿ ಪೂಜೆಗೆ ಗ್ರಾಮಸ್ಥರು ಭಾಗವಹಿಸಬೇಕು ಎಂದು ಗೋಪಾಲ್ ಹೊರೆಯಾಲ ಮನವಿ ಮಾಡಿದ್ದಾರೆ.

ನಾಳೆ ವಿದ್ಯುತ್ ವ್ಯತ್ಯಯ

ಕೊಳ್ಳೇಗಾಲ: ಮೇ 10 ಭಾನುವಾರ ಕೊಳ್ಳೇಗಾಲದಿಂದ ಹೊರಹೊಮ್ಮುವ ಟೌನ್-1 ಫೀಡರ್‌ನ ನಿರ್ವಹಣ ಕಾಮಗಾರಿಯನ್ನು ಹಮ್ಮಿಕೊಂಡಿರುವುದರಿಂದ, ಈ ಫೀಡರ್‌ಗೆ ಒಳಪಡುವ ಹಲವೆಡೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದೆ. ಪಟ್ಟಣದ ಆದರ್ಶನಗರ, ಆಶ್ರಯ ಬಡಾವಣೆ, ಲಿಂಗಣಾಪುರ, ಸಿದ್ದಯ್ಯನಪುರ ಹಾಗೂ ಸುತ್ತಮುತ್ತಲಿನ ಕಡೆಗಳಲ್ಲಿ ಬೆಳಗ್ಗೆ 10ರಿಂದ ಸಂಜೆ 6ರವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದ್ದು, ಎಂದಿನಂತೆ ನಿಗಮದ ಜೊತೆ ಗ್ರಾಹಕರು ಸಹಕರಿಸಬೇಕೆಂದು ಸೆಸ್ಕಾಂ ಪ್ರಕಟಣೆ ತಿಳಿಸಿದೆ.

‘ಏನ್ಮಾಡ್ತಿದ್ಯಯ್ಯ ನೀನು?’ ಸಚಿವರಿಂದ ತರಾಟೆ

ನೀರಾವರಿ ಕಾಮಗಾರಿ ಕುರಿತು ಹನೂರು ಇಇಗೆ ಸಚಿವ ವೆಂಕಟೇಶ್ ಗರಂ | ಕೆಲಸ ಮಾಡದಿದ್ದರೆ ಹೊರಹಾಕುವುದಾಗಿ ಎಚ್ಚರಿಕೆ

• **ಕನ್ನಡಪ್ರಭ ವಾರ್ತೆ** ಚಾಮರಾಜನಗರ

‘ಏನಯ್ಯ ಮಾಡ್ತಾ ಇದ್ದೀಯಾ ನೀನು?.... ನಿನ್ನ ಡೈರಿ ಕೊಡು ಎಲ್ಲೆಲ್ಲಿಗೆ ಭೇಟಿ ನೀಡಿದ್ದೀಯಾ ನೋಡ್ತೀನಿ. ಹುಡುಗಾಟ ಆಡ್ತಾ ಇದ್ದೀಯಾ? ಎಂದುಜಿಲ್ಲಾಉಸ್ತುವಾರಿ ಸಚಿವ ಕೆ. ವೆಂಕಟೇಶ್ ಅವರು ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಇಇಗೆ ಹಿಗ್ಗಾಮುಗ್ಗ ತರಾಟೆಗೆ ತೆಗೆದುಕೊಂಡ ಘಟನೆ ಚಾಮರಾಜನಗರದಲ್ಲಿ ನಡೆದಿದೆ.



ನಗರದ ಕೆಡಿಪಿ ಸಭಾಂಗಣದಲ್ಲಿ ನಡೆದ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಇಇ ಇಮ್ಯಾನುವಲ್ ಸಂತೋಷ್ ಕುಮಾರ್ ಅವರಿಗೆ ಕುಡಿಯುವ ನೀರಿನ ಸಮಸ್ಯೆ ಬಗ್ಗೆ ಪ್ರಶ್ನೆ ಮೇಲೆ ಪ್ರಶ್ನೆ ಹಾಕಿ ಸಚಿವರು ಬೆವರಿಳಿಸಿದರು.

ಜಿಲ್ಲೆಯ ಹಲವು ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ತೀವ್ರವಾಗಿದೆ. ಬಹುಗ್ರಾಮ ಕುಡಿಯುವ ನೀರಿನ ಯೋಜನೆ ಮತ್ತು ಜಲ ಜೀವನ್‌ಮಿಷನ್‌ಸಮರ್ಪಕವಾಗಿಅನುಷ್ಠಾನಗೊಳಿಸಿದ್ದರೆ ಎಂಥ ಬೇಸಿಗೆ ಎದುರಾದರೂ ನೀರಿನ ಸಮಸ್ಯೆ ಬರುತ್ತಿರಲಿಲ್ಲ ಎಂದು ಇಮ್ಯಾನುವಲ್ ಅವರನ್ನು ತರಾಟೆಗೆ ತೆಗೆದುಕೊಂಡರು.

ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆಗೆ ಪರಿಹಾರ ಒದಗಿಸಲು 20 ಕೋಟಿ ರು. ಬೇಕು. ಅಧಿಕಾರಿಗಳು ಪ್ರಸ್ತಾಪ ಮಾಡಿದರು. ಆಗ ಮಧ್ಯ ಪ್ರವೇಶಿದ ಹನೂರು ಶಾಸಕ ಎಂ.ಆರ್. ಮಂಜುನಾಥ್ ಅದರಲ್ಲೂ ಹನೂರು ಭಾಗಕ್ಕೆ 11 ಕೋಟಿ ರು. ಬೇಕು

ನಮ್ಮ ಭಾಗದಲ್ಲಿ ಸಮಸ್ಯೆ ಜಾಸ್ತಿ ಇದೆ. ವಾರಕ್ಕೆ ಒಮ್ಮೆಯಾದರೂ ಹಳ್ಳಿಗಳಿಗೆ ಭೇಟಿ ನೀಡಿ ಎಂದು ಕುಡಿಯುವ ನೀರು ವಿಭಾಗದ ಇಇ ಅವರಿಗೆ ತಿಳಿಸಿದ್ದೇ... ಆದರೆ, ಒಮ್ಮೆಯೂ ಭೇಟಿ ನೀಡಿಲ್ಲ ಎಂದು ಅಳಲು ತೋಡಿಕೊಂಡರು. ಇದರಿಂದ ಸಚಿವ ವೆಂಕಟೇಶ್ ಮತ್ತಷ್ಟು ಕೆಂಡಗೊಂಡರು.

ಗ್ರಾಮಗಳಿಗೆ ಭೇಟಿ ನೀಡಿ ಸಮಸ್ಯೆ ನೋಡಿದ್ದೀಯಾ? ಆಫೀಸ್‌ನಲ್ಲಿ ಏನ್ ಕೆಲಸ ಮಾಡ್ತಾ ಇದ್ದೀಯಾನಿನ್ನ ಡೈರಿ ಕೊಡು ಎಲ್ಲೆಲ್ಲಿಗೆ ಭೇಟಿ ನೀಡಿದ್ದೀಯಾ ನೋಡ್ತೀನಿ.... ತೆಗೆದುಕೊಂಡು ಬಾ ಎಂದು ಗದರಿದರು. ಪರಿಣಾಮ ಇಇ ತಬ್ಬಿಬ್ಬಾದರು.

ನೀನು ಎಂಎಲ್‌ಎ ಕಡೆಯಿಂದ ಪೋಸ್ಟಿಂಗ್ ಹಾಕಿಸಿಕೊಂಡು ಬಂದಿರಬಹುದು. ನಾನು ಸುಮ್ಮನೆಬಿಡುವುದಿಲ್ಲ.ಇಲ್ಲಿಂದಹೊರಹಾಕಬೇಕಾಗುತ್ತದೆ. ನೀವೇನು ಮನುಷ್ಯರೋ ಏನು? ಸುಳ್ಳು ಹೇಳಿಕೊಂಡು ಕಾಲ ಕಳೀತಾ ಇದ್ದೀರಾ?

ಯೋಜನೆ ಪೂರೈಸುವುದಕ್ಕೆ 3-4 ವರ್ಷ ಬೇಕಾ? ಎಂದು ಅಧಿಕಾರಿಗಳಿಗೆ ಝಾಡಿಸಿದರು.

ಕುಡಿಯುವ ನೀರಿನ ಸಮಸ್ಯೆ ಬಗ್ಗೆ ಸಮರ್ಪಕವಾಗಿ ಕಾರ್ಯ ನಿರ್ವಹಿಸುವಲ್ಲಿ ವಿಫಲವಾಗಿರುವ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಲು ಸರ್ಕಾರಕ್ಕೆ ವರದಿ ಕೊಡಿ ಎಂದು ಜಿಪಂ ಸಿಇಒ ಮೋನಾ ರೋತ್ ಅವರಿಗೆ ಸೂಚಿಸಿದರು.

ಸಭೆ ಹೇಗಿತ್ತು?

- ಹುಡುಗಾಟ ಆಡ್ತಾ ಇದ್ದೀಯಾ ಎಂದು ಸಚಿವರ ವಾಕ್ ಪ್ರಹಾರ
- ಹನೂರಿನಲ್ಲಿ ವ್ಯಾಪಕವಾಗಿರುವ ನೀರಿನ ಸಮಸ್ಯೆ ಕುರಿತು ಕಿಡಿ
- ಯೋಜನೆ ಪೂರ್ಣಕ್ಕೆ 3–4 ವರ್ಷ ಅವಧಿ ಕುರಿತು ಕುರಿತು ಕೆಂಡ
- ಸರಿಯಾಗಿ ಕೆಲಸ ಮಾಡದಿದ್ದರೆ ಹೊರಹಾಕುವುದಾಗಿ ಎಚ್ಚರಿಕೆ
- ಸಚಿವ ಕೆ. ವೆಂಕಟೇಶ್ ಚಾಟಿಗೆ ಇಇ ಇಮ್ಯಾನುವಲ್ ಸಂತೋಷ್ ಥಂಡಾ

ಕುಡಿಯುವ ನೀರಿನ ಸಮಸ್ಯೆ ತುರ್ತಾಗಿ ಬಗೆಹರಿಸಲು ಸಚಿವ ವೆಂಕಟೇಶ್ ಒತ್ತು

ಕಚೇರಿಯಲ್ಲಿರದೆ, ಸ್ಥಳಕ್ಕೆ ತೆರಳಿ ವಾಸ್ತವ ಅರಿಯಲು ಅಧಿಕಾರಿಗಳಿಗೆ ತಾಕೀತು
ನೀರಾವರಿ ಕೆಲಸಗಳಾಗದ ಬಗ್ಗೆ ಸಚಿವರೆದುರು ಶಾಸಕದ್ವಯರ ಅಸಮಾಧಾನ

• **ಕನ್ನಡಪ್ರಭ ವಾರ್ತೆ** ಚಾಮರಾಜನಗರ

ಜಿಲ್ಲೆಯ ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿನ ಕುಡಿಯುವ ನೀರಿನ ಸಮಸ್ಯೆಯನ್ನು ಆದ್ಯತೆ ಮೇರೆಗೆ ಪರಿಹರಿಸಲು ಕ್ರಮ ವಹಿಸುವಂತೆ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಸೂಚಿಸಿದರು.

ಜಿಲ್ಲಾಮಟ್ಟದ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದರು.

ಈ ಬಾರಿ ಏಪ್ರಿಲ್ ಮತ್ತು ಮೇನಲ್ಲಿ ವಾಡಿಕೆಗಿಂತ ಕಡಿಮೆ ಮಳೆಯಾಗಿರುವ ಹಿನ್ನೆಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗುವ ಸಂಭವವಿದೆ. ಈ ನಿಟ್ಟಿನಲ್ಲಿ ಎಲ್ಲಾ ತಾಲೂಕು ಪಂಚಾಯ್ತಿ ಇಓಗಳು, ಗ್ರಾಮೀಣ ಮತ್ತು ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಅಧಿಕಾರಿಗಳು ಕುಡಿಯುವ ನೀರಿನ ಸಮಸ್ಯೆ ತಲೆದೋರದಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು. ಜನರಿಂದ ಯಾವುದೇ ದೂರುಗಳು ಬಾರದಂತೆ ನೋಡಿಕೊಳ್ಳಬೇಕು ಎಂದು ಕಟ್ಟುನಿಟ್ಟಾಗಿ ಸೂಚಿಸಿದರು.

ಹನೂರು ತಾಲೂಕಿನ ಸಾಕಷ್ಟು ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಇದೆ. ವಿವಿಧ ಗ್ರಾಮ ಪಂಚಾಯ್ತಿಗಳಲ್ಲಿಕುಡಿಯುವ ನೀರಿನ ಸಮಸ್ಯೆ ಪರಿಹರಿಸಿರುವ ಬಗ್ಗೆ ಆಯಾ ಸ್ಥಳದ ಜಿಪಿಎಸ್ ಛಾಯಾಚಿತ್ರ, ವಿಡಿಯೋಗಳನ್ನು ಸಂಗ್ರಹಿಸಿ ವರದಿ ಸಲ್ಲಿಸಬೇಕು. ಮುಂದಿನ ವಾರದಲ್ಲಿ ಸಮಸ್ಯೆ ಇರುವ ಗ್ರಾಮಗಳಿಗೆ ತೆರಳಿ ಜನರಿಂದ ಅಹವಾಲು ಸ್ವೀಕರಿಸುವ ಕಾರ್ಯಕ್ರಮವಿದೆ. ಕುಡಿಯುವ ನೀರಿನ ಸಂಬಂಧ ಸಾರ್ವಜನಿಕರ ದೂರುಗಳಿಗೆ ಅಧಿಕಾರಿಗಳು ಯಾವುದೇ ಸಬೂಬು ಹೇಳಿದರೆ ಸಹಿಸುವುದಿಲ್ಲ. ನೀರಿನ ಸಮಗ್ರ ವರದಿ ತಯಾರಿಸಿ ಜಿಲ್ಲಾ ಪಂಚಾಯ್ತಿ ಅಧಿಕಾರಿಗಳಿಗೆ ವರದಿ ಸಲ್ಲಿಸುವಂತೆ ಅವರು ನಿರ್ದೇಶನ ನೀಡಿದರು.

ಇದೇ ವೇಳೆ ಮಾತನಾಡಿದ ಶಾಸಕ ಸಿ. ಪುಟ್ಟರಂಗಶೆಟ್ಟಿ ಅವರು ಜಲಜೀವನ್ ಮಿಷನ್ ಸಮರ್ಪಕವಾಗಿ ಜಾರಿಗೊಳಿಸಿದರೆ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ತೆ ಎದುರಾಗುವುದಿಲ್ಲ. ಜೆಜೆಎಂ ಪೈಪ್‌ಲೈನ್ ಕಾಮಗಾರಿಗಾಗಿ ಪ್ರತಿವರ್ಷ 5 ಕೋಟಿ ರು. ಅನುದಾನ ನೀಡುತ್ತಿದ್ದರೂ ನಿರೀಕ್ಷಿತ ಪ್ರಮಾಣದಲ್ಲಿ ಅನುಷ್ಠಾನಗೊಂಡಿಲ್ಲ. ಪೈಪ್‌ಲೈನ್ ಸೋರುವಿಕೆ ತಡೆಗಟ್ಟಲು ಸಾಕಷ್ಟು ಅನುದಾನ ಖರ್ಚಾಗುತ್ತಿದೆ. ಕೆಲವೆಡೆ ಪೈಪ್‌ಲೈನ್ ಕಾಮಗಾರಿ ಅಪೂರ್ಣವಾಗಿದೆ. ಕಾಮಗಾರಿ ಶೀಘ್ರವಾಗಿ ಪೂರ್ಣಗೊಳಿಸಲು ಮೊದಲ ಆದ್ಯತೆ ನೀಡಬೇಕು ಎಂದರು.

ಬಹುಗ್ರಾಮ ಕುಡಿಯುವ ನೀರಿನ ಯೋಜನೆಯ ಕೆರೆಗಳಿಗೆ ನೀರು ತುಂಬಿಸುವ ಕಾರ್ಯಕ್ರಮದಡಿ ಒಂದು ಕೆರೆಯಿಂದ ಮತ್ತೊಂದಕ್ಕೆ ಕೆರೆಗೆ ಪೈಪ್‌ಲೈನ್ ಮೂಲಕ ನೀರು ಹರಿಸಬೇಕು. ಕಾಲುವೆ ಮೂಲಕ ನೀರು ಮತ್ತೊಂದು ಕೆರೆ ತಲುಪಲು 15ರಿಂದ 20 ದಿನ ಸಮಯ ಹಿಡಿದು ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ಹೆಚ್ಚಾಗಲಿದೆ. ಸಣ್ಣ ನೀರಾವರಿ ಇಲಾಖೆ ಅಧಿಕಾರಿಗಳು ಈ ಬಗ್ಗೆ ತುರ್ತಾಗಿ ಗಮನ ಹರಿಸಿ ಸಮಸ್ಯೆ ಬಗೆಹರಿಸಲು ಮುಂದಾಗಬೇಕು ಎಂದು ಸೂಚಿಸಿದರು.

ಈ ಬಾರಿಯ ಎಸ್‌ಎಸ್‌ಎಲ್‌ಸಿ ಫಲಿತಾಂಶದ ಬಗ್ಗೆ ಶಿಕ್ಷಣ ಇಲಾಖೆಯ ಅಧಿಕಾರಿಗಳಿಂದ ಮಾಹಿತಿ ಪಡೆದ ಉಸ್ತುವಾರಿ ಸಚಿವರು, ಸರ್ಕಾರಿ ಶಾಲೆಗಳಿಗೆ ಸರ್ಕಾರ ಎಲ್ಲಾ ಅವಶ್ಯ ಸೌಲಭ್ಯಗಳನ್ನು ನೀಡುತ್ತಿದ್ದರೂ ಪರೀಕ್ಷೆಯಲ್ಲಿ ಸರ್ಕಾರಿ ಶಾಲೆಗಳಿಗಿಂತ ಖಾಸಗಿ ಶಾಲೆಗಳ ಫಲಿತಾಂಶ ಉತ್ತಮವಾಗಿದೆ. ಇದಕ್ಕೆ ಕಾರಣಗಳನ್ನು ಹುಡುಕಿ ಸಮಸ್ಯೆ ಪರಿಹಾರಕ್ಕೆ ಅಧಿಕಾರಿಗಳು ಮುಂದಾಗಬೇಕು. ಈ ಬಾರಿ ಸರ್ಕಾರಿ ಶಾಲೆಗಳಿಗೆ ಪರಿಶಿಷ್ಟ ಜಾತಿ, ವರ್ಗಗಳು ಹಾಗೂ ಅಲ್ಪಸಂಖ್ಯಾತ ಮಕ್ಕಳ ದಾಖಲಾತಿ ಹೆಚ್ಚಾಗುವಂತೆ ನೋಡಿಕೊಳ್ಳುವಂತೆ ಸೂಚಿಸಿದರು.

ಹನೂರು ಶಾಸಕ ಎಂ.ಆರ್. ಮಂಜುನಾಥ್ ಮಾತನಾಡಿ, ಈ ಬಾರಿ ಹನೂರು ತಾಲೂಕಿನ ಕೆಂಪಯ್ಯನಹಟ್ಟಿ ಸರ್ಕಾರಿ ಶಾಲೆಯಲ್ಲಿ 2 ವಿಷಯಗಳಿಗೆ ಶಿಕ್ಷಕರ ಕೊರತೆ ಇದ್ದರೂ ಆನ್‌ಲೈನ್ ಮೂಲಕ ಮಾಹಿತಿ ಅರಿತು ವಿದ್ಯಾರ್ಥಿಯೊಬ್ಬ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ 625ಕ್ಕೆ 618 ಅಂಕಗಳಿಸಿದ್ದಾನೆ. ಆ ಶಾಲೆಯ ಶಿಕ್ಷಕರ ಕೊರತೆ ಪರಿಹರಿಸಲು ಅಧಿಕಾರಿಗಳು ಕ್ರಮವಹಿಸಬೇಕು ಎಂದರು.

ಗುಂಡ್ಲುಪೇಟೆ ಶಾಸಕರಾದ ಎಚ್.ಎಂ. ಗಣೇಶ್ ಪ್ರಸಾದ್, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಹಮದ್ ಅಸ್ಗರ್, ಜಿಲ್ಲಾಧಿಕಾರಿ ಶ್ರೀರೂಪಾ, ಜಿಲ್ಲಾ ಪಂಚಾಯ್ತಿ ಸಿಇಓ ಮೋನಾ ರೋತ್, ಪೊಲೀಸ್ ವರಿಷ್ಠಾಧಿಕಾರಿ ಮುತ್ತುರಾಜು, ಕೆಡಿಪಿ ಅಧಿಕಾರೇತರ ಸದಸ್ಯ ಸಯ್ಯದ್ ಮುಸಾಯಿಲ್, ಶಂಕರಪ್ಪ, ಭವ್ಯಾ ಮುನಿರಾಜು ಇತರರಿದ್ದರು.



ಜಿಲ್ಲಾಡಳಿತ ಭವನದ ಕೆಡಿಪಿ ಸಭಾಂಗಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಕೆ. ವೆಂಕಟೇಶ್ ಅವರ ಅಧ್ಯಕ್ಷತೆಯಲ್ಲಿ ಕೆಡಿಪಿ ಪ್ರಗತಿ ಪರಿಶೀಲನಾ ಸಭೆ ನಡೆಯಿತು. ಈ ವೇಳೆ ಶಾಸಕರು ಸೇರಿದಂತೆ ಅಧಿಕಾರಿಗಳಿದ್ದರು.

ಸಭೆ ಮುಖ್ಯಾಂಶಗಳು

- ಏಪ್ರಿಲ್ ಮತ್ತು ಮೇ ತಿಂಗಳಿನಲ್ಲಿ ವಾಡಿಕೆಗಿಂತ ಕಡಿಮೆ ಮಳೆ, ಪರಿಣಾಮ ಜಿಲ್ಲೆಯ ಹಲವೆಡೆ ನೀರಿನ ಅಭಾವ ಸಂಭವ
- ಕುಡಿಯುವ ನೀರಿನ ಸಮಸ್ಯೆ ಬಗೆಹರಿಸುವ ನಿಟ್ಟಿನಲ್ಲಿ ತಾಲೂಕು ಪಂಚಾಯ್ತಿ ಇಓ ಕಾರ್ಯನಿರ್ವಹಿಸಬೇಕು
- ನೀರನ ಅಭಾವವಿರುವ ಗ್ರಾಮಗಳಲ್ಲಿ ಅಧಿಕಾರಿಗಳು ಸ್ಥಳಕ್ಕೆ ತೆರಳಿ ಪರಿಶೀಲನೆ ನಡೆಸಿ, ಶಮನಗೊಳಿಸಬೇಕು
- ಪೈಪ್‌ಲೈನ್ ಕಾಮಗಾರಿಗಳು ಬಾಕಿ ಉಳಿದಿರುವ ಕಡೆಗಳಲ್ಲಿ ಶೀಘ್ರ ಮುಕ್ತಾಯಗೊಳಿಸಬೇಕು
- ಬೋರ್‌ವೆಲ್‌ಗಳು ಬತ್ತಿದ್ದಲ್ಲಿ ಅವುಗಳ ರೀಬೋರ್ ಮಾಡಿಸು ಕುರಿತು ಅಧಿಕಾರಿಗಳು ಅಗತ್ಯ ಕ್ರಮ ವಹಿಸಬೇಕು
- ಅಗತ್ಯವಿರುವ ಕಡೆಗಳಲ್ಲಿ ಟ್ಯಾಂಕರ್ ಮೂಲಕ ನೀರು ಪೂರೈಸಿ, ಜನ ಜಾನುವಾರುಗಳ ದಾಹ ಕಡಿಮೆಗೊಳಿಸಬೇಕು
- ನೀರಿನ ಕುರಿತು ಮೇಲುಸ್ತುವಾರಿಗೆ ತಾಲೂಕು, ಗ್ರಾಮ ಪಂ. ಕ್ರಿಯಾಶೀಲ ಅಧಿಕಾರಿ ನೇಮಕ
- ನೀರಿನ ಸಮಸ್ಯೆ ಬಗೆಹರಿಸಲು ಗ್ರಾಮ ಪಂಚಾಯ್ತಿ ವ್ಯಾಪ್ತಿಯಲ್ಲಿ ಬರಪೀಡಿತ ಪ್ರದೇಶದ ಜಿಪಿಎಸ್ ಛಾಯಾಚಿತ್ರ ಸಂಗ್ರಹಿಸಿ ವರದಿ ಸಲ್ಲಿಸಲು ಅಧಿಕಾರಿಗಳು ಕ್ರಮ ಕೈಗೊಳ್ಳಲು ಸಚಿವರ ಸೂಚನೆ

ಮೇವಿನ ಕೊರತೆ ಇಲ್ಲ: ಸಚಿವ ಕೆ. ವೆಂಕಟೇಶ್

ಪರ ರಾಜ್ಯಗಳಿಗೆ ಮೇವು ಸಾಗಾಟದ ವಿರುದ್ಧ ಕ್ರಮ

• **ಕನ್ನಡಪ್ರಭ ವಾರ್ತೆ** ಚಾಮರಾಜನಗರ

ನಮ್ಮಲ್ಲಿ ಸಾಕಾಗುವಷ್ಟು ಮೇವಿನ ಲಭ್ಯತೆ ಇದೆ ಎಂದು ಅಧಿಕಾರಿಗಳು ವರದಿ ನೀಡಿದ್ದಾರೆಂದು ಪಶು ಸಂಗೋಪನಾ ಸಚಿವ ಕೆ. ವೆಂಕಟೇಶ್ ಹೇಳಿದರು.

ಚಾಮರಾಜನಗರದಲ್ಲಿ ಸುದ್ದಿಗಾರರೊಂದಿಗೆ ಅವರು ಮಾತನಾಡಿ, ಮೇವಿನಕೊರತೆಸದ್ಯಕ್ಕೆಇಲ್ಲ. ಅಂತಾರಾಜ್ಯಕ್ಕೆ ಮೇವು ಸಾಗಾಟ ನಡೆಯುತ್ತಿದ್ದರೇ, ಈ ಬಗ್ಗೆ ಪರಿಶೀಲನೆ ನಡೆಸಿ ತಡೆಯುವ ಬಗ್ಗೆ ಕ್ರಮ ವಹಿಸಲಾಗುತ್ತದೆ ಎಂದರು.

ಪಶ್ಚಿಮ ಬಂಗಾಲದಲ್ಲಿ ಗಲಾಟೆ- ಘರ್ಷಣೆ ಮುಂದುವರೆಯುವುದು ಒಳ್ಳೆಯ ಬೆಳವಣಿಗೆ ಅಲ್ಲ ಎಂದ ಸಚಿವರು ತಮಿಳುನಾಡಿನಲ್ಲಿ ದೊಡ್ಡ ಪಕ್ಷವಾಗಿರುವ ಟಿವಿಕೆಗೆ ಸರ್ಕಾರ ರಚಿಸಲು ರಾಜ್ಯಪಾಲರು ಅವಕಾಶ ಕೊಡಬೇಕು. ಬಹುಮತ ಸಾಬೀತು ಮಾಡಬೇಕಾದ್ದು ವಿಧಾನಸಭೆಯಲ್ಲೇ ಹೊರತು ರಾಜಭವನದಲ್ಲಲ್ಲ ಎಂದು ಪ್ರತಿಪಾದಿಸಿದರು.


ಇದೇ ವೇಳೆ, ವಿಬಿ ಜಿರಾಂಜಿ ಯೋಜನೆ ಬಗ್ಗೆ ಕೇಂದ್ರ ಸರ್ಕಾರವೇ ಗೊಂದಲದಲ್ಲಿದೆ. ಆದ್ದರಿಂದ, ನರೇಗಾವನ್ನೇ ಮುಂದುವರೆಸಬೇಕೆಂದು ಕಾನೂನು ಹೋರಾಟ ಮಾಡುತ್ತೇವೆ ಎಂದರು.

ಅಂಗಡಿಗೆ ಬಂದ ಕೋತಿಗೆ ಕಟಿಂಗ್, ಹೇರ್ ಸ್ಟೈಲ್ ಮಾಡಿ ಕಳಿಸಿದರು!

ಚಾ.ನಗರದ ಸಂತೇಮರಹಳ್ಳಿಯಲ್ಲಿ ಹೀಗೊಂದು ಪ್ರಸಂಗ

• **ಕನ್ನಡಪ್ರಭ ವಾರ್ತೆ** ಚಾಮರಾಜನಗರ

ಚೇಷ್ಟೆಗೆ ಹೆಸರಾಗಿರುವ ಕೋತಿಗಳು ಒಮ್ಮೊಮ್ಮೆ ತಮ್ಮ ವಿಶೇಷ ವರ್ತನೆಗಳಿಂದ ಎಲ್ಲರನ್ನೂ ಗಮನ ಸೆಳೆಯುತ್ತವೆ. ಜೊತೆಗೆ, ನೋಡುಗರ ಮೊಗದಲ್ಲಿ ನಗುವನ್ನು ಉಕ್ಕಿಸುತ್ತವೆ. ಆದರಂತೆ, ಚಾಮರಾಜನಗರ ತಾಲೂಕಿನ ಸಂತೇಮರಹಳ್ಳಿಯಲ್ಲಿ ಕೋತಿಗೆ ಹೇರ್ ಸ್ಟೈಲ್ ಮಾಡಿದ ಘಟನೆ ನಡೆದಿದೆ.



ಸಂತೇಮರಹಳ್ಳಿ ಗ್ರಾಮದ ದೇವು ಸಲೂನ್ ಎಂಬಲ್ಲಿಗೆ ಕೋತಿಯೊಂದು ಆಗಾಗ್ಗೆ ಬಂದು ಹೋಗುತ್ತಿತ್ತು. ಕನ್ನಡಿ ನೋಡುತ್ತಾ ಕುಳಿತುಕೊಳ್ಳುತ್ತಿತ್ತು. ಇದನ್ನು ಗಮನಿಸಿದ ಸಲೂನ್ ಮಾಲೀಕ ದೇವರಾಜ್ ಗದರಿಸಿದರೂ ಕೋತಿ ಸಲೂನ್ ಬಿಟ್ಟು ಹೋಗುತ್ತಿರಲಿಲ್ಲ. ಆದರಂತೆ, ಗುರುವಾರದಂದು ಸಲೂನ್‌ಗೆ ಬಂದ ಮಂಗನನ್ನು ಕಂಡ ದೇವರಾಜ್ ಮೊದಲು ತಲೆ ಬಾಚಿದ್ದಾರೆ. ದೇವರಾಜ್ ಅವರು ಪ್ರೀತಿಯಿಂದ ತಲೆ ಬಾಚಿದ್ದನ್ನು ಗಮನಿಸಿದ ಕೋತಿ ಮನುಷ್ಯರಂತೆ ತಲೆ ಬಗ್ಗಿಸಿ ಕುಳಿತಿದೆ. ದೇವರಾಜ್ ಕೋತಿಗೆ ತಲೆಬಾಚಿ ಹೇರ್ ಸ್ಟೈಲ್ ಮಾಡಿದ್ದು, ಅಲ್ಲಿಯೇ ಇದ್ದ ಗ್ರಾಹಕರೊಬ್ಬರು ವಿಡಿಯೋ ಸೆರೆ ಹಿಡಿದಿದ್ದಾರೆ. ಈ ಕುರಿತು ದೇವರಾಜು ಮಾತನಾಡಿದ್ದು, ಗುಂಪೊಂದರಲ್ಲಿ ಇದ್ದ ಈ ಮಂಗ ದಿನನಿತ್ಯ ಸಲೂನ್ ಬಳಿ ಬರುತ್ತಿತ್ತು. ಎಷ್ಟೇ ಗದರಿಸಿದರೂ ನನ್ನ ಕೆಲಸ ಮುಗಿಯುವವರೆಗೂ ಅಲ್ಲಿಂದ ಕದಲುತ್ತಿರಲಿಲ್ಲ. ತಮಾಷೆಗಾಗಿ ತಲೆ ಬಾಚಿದೆ, ಕೋತಿ ತಲೆ ಬಗ್ಗಿಸಿ ಕುಳಿತು ಮತ್ತಷ್ಟು ತಲೆ ಬಾಚುವಂತೆ ಕೇಳಿಕೊಳ್ಳುವಂತೆ ವರ್ತಿಸಿದಾಗ ಹೇರ್ ಸ್ಟೈಲ್ ಮಾಡಿದೆ ಎಂದರು.

ವಿದ್ಯಾ ವಿವೇಚನೆ | ವಿದ್ಯಾರ್ಥಿಗಳು ಯೋಚಿಸಿ ಭವಿಷ್ಯ ಭದ್ರಪಡಿಸಿಕೊಳ್ಳುವಂತೆ ಶಾಸಕರಿಂದ ಸಲಹೆ

ಸರಿಯಾದ ಕೋರ್ಸ್ ಸೇರಿದರೆ ಭವಿಷ್ಯ ಉಜ್ವಲ: ಗಣೇಶ್ ಪ್ರಸಾದ್

• **ಕನ್ನಡಪ್ರಭ ವಾರ್ತೆ** ಗುಂಡ್ಲುಪೇಟೆ

ವಿದ್ಯಾರ್ಥಿಗಳ ಭವಿಷ್ಯ ಉಜ್ವಲವಾಗಿರಲಿ, ಯೋಚಿಸಿ ಮುಂದಿನ ಓದಿನ ಆಯ್ಕೆ ಮಾಡಿಕೊಳ್ಳಿ ಎಂದು ಶಾಸಕ ಎಚ್.ಎಂ. ಗಣೇಶ್ ಪ್ರಸಾದ್ ಸಲಹೆ ನೀಡಿದರು.

ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಸಾಂಸ್ಕೃತಿಕ, ಕ್ರೀಡೆ, ರಾ.ಸೇ.ಯೋ, ರೋವರ್ಸ್ ಮತ್ತು ರೇಂಜರ್ಸ್, ರೆಡ್ ಕ್ರಾಸ್ ಹಾಗೂ ವಿವಿಧ ಸಮಿತಿ ಚಟುವಟಿಕೆಗಳ ಸಮಾರೋಪ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಯಾರದೋ ಹಿಂಸೆಗೆ ಓದಲು ಆಗುವುದಿಲ್ಲ. ಇದೀಗ ಹೊಸ ಹೊಸ ಕೋರ್ಸ್ ಗಳು ಬರುತ್ತಿವೆ. ಸರಿಯಾದ ಕೋರ್ಸ್ ಆಯ್ಕೆ ಮಾಡಿಕೊಂಡರೆ ಮುಂದಿನ ಉತ್ತಮ ಭವಿಷ್ಯ ತಮ್ಮದಾಗಲಿದೆ ಎಂದು ಕಿವಿಮಾತು ಹೇಳಿದರು.

ಕಾಲೇಜಿಗೆ ಕುಡಿಯುವ ನೀರಿನ ಸಮಸ್ಯೆ ಕುರಿತು ಹೇಳಿದ್ದೀರಿ. ಇನ್ನು 8ರಿಂದ 10 ದಿನಗಳಲ್ಲಿ ಕುಡಿಯುವ ನೀರಿನ ಸಮಸ್ಯೆಗೆ ಪರಿಹಾರ ಒದಗಿಸಿಕೊಡುತ್ತೇನೆ ಎಂದು ಭರವಸೆ ನೀಡಿದರು.

ಅಪರ ಜಿಲ್ಲಾಧಿಕಾರಿ ಟಿ. ಜವರೇಗೌಡ ಮಾತನಾಡಿ, ವಿದ್ಯಾರ್ಥಿಗಳು ಕನಸುಗಳನ್ನು ಕಾಣಬೇಕು. ಎದೆಗುಂದದೆ, ಆಲೋಚನೆಗಳು ಸಕರಾತ್ಮಕವಾಗಿರಬೇಕು. ಸತತ ಪ್ರಯತ್ನ ಇದ್ದರೆ ಗುರಿ ತಲುಪಲು ಸಾಧ್ಯ ಎಂದರು.

ವಿದ್ಯಾರ್ಥಿಗಳು ಅವಕಾಶಗಳನ್ನು ಸದುಪಯೋಗಪಡಿಸಿಕೊಳ್ಳಬೇಕು. ಉದ್ಯೋಗ ಪಡೆಯಲು ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಯಶಸ್ವಿ ಕಾಣಬೇಕು ಎಂಬುದು ನಿಮ್ಮ ಗುರಿಯಾಗಿರಬೇಕು ಎಂದರು.

ತಹಸೀಲ್ದಾರ್ ಎಂ.ಎಸ್. ತನ್ಮಯ್ ಮಾತನಾಡಿ, ವಿದ್ಯಾರ್ಥಿಗಳು ಭವಿಷ್ಯ ರೂಪಿಸಿಕೊಳ್ಳಲು ಶಿಕ್ಷಣವೇ ಪ್ರಮುಖ ಅಸ್ತ್ರವಾಗಿದ್ದು, ವಿದ್ಯಾರ್ಥಿಗಳು ಓದುವತ್ತ ಮಾತ್ರ ಗಮನಹರಿಸಿ ಎಂದರು.

ಕಾಲೇಜು ಅಭಿವೃದ್ಧಿ ಸಮಿತಿ ಕಾರ್ಯಾಧ್ಯಕ್ಷ ಬಿ. ಕುಮಾರಸ್ವಾಮಿ ಮಾತನಾಡಿದರು. ಪ್ರಾಂಶುಪಾಲ ಡಾ. ಮದನ ಕುಮಾರ್ ಎ.ಆರ್. ಅಧ್ಯಕ್ಷತೆ ವಹಿಸಿದ್ದರು.

ಎಪಿಎಂಸಿ ಅಧ್ಯಕ್ಷ ಆರ್.ಎಸ್. ನಾಗರಾಜು, ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಪಿ.ಬಿ. ರಾಜಶೇಖರ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ತಾಲೂಕು ಅಧ್ಯಕ್ಷ ಎಂ. ಉಮಾಪತಿ, ಕಾಲೇಜು ಅಭಿವೃದ್ಧಿ ಸಮಿತಿ ಸದಸ್ಯರಾದ ಅಣ್ಣಯ್ಯಸ್ವಾಮಿ, ಶಾಂತರಾಂ,

ಸಾಂಸ್ಕೃತಿಕ ಸಂಚಾಲಕ ಲಕ್ಷ್ಮೀ ಎಸ್.ಎಸ್, ಕ್ರೀಡಾ ಸಂಚಾಲಕ ಪುಟ್ಟರಾಜು ಎಸ್ ಜೆರಾಸೇಯೋ ಘಟಕಗಳ ಸಂಚಾಲಕರಾದ ಕವಿತಾ ಎ, ಕೃಷ್ಣಮೂರ್ತಿ, ರೋವರ್ಸ್ ಸಂಚಾಲಕ ಡಾ. ತುಳಸಿರಾಮ್ ಎಸ್, ರೇಂಜರ್ಸ್ ಘಟಕ ಸಂಚಾಲಕಿ ದಿವ್ಯಾ ಭಾರತಿ ಜೆ, ರೆಡ್ ಕ್ರಾಸ್ ಘಟಕ ಸಂಚಾಲಕಿ ಸಂಯುಕ್ತ ಸಿಂಗ್ ಟಿ, ಐಕ್ಯೂಎಸಿ ಸಂಚಾಲಕ ವಿಜಯಕುಮಾರ್, ಗ್ರಂಥಪಾಲಕ ಶ್ರೀನಿವಾಸನಾಯಕ ಹಾಗೂ ಡಾ. ಜ್ಯೋತಿ ಕೆ.ಎಸ್, ಯಶೋಧ ಸೇರಿದಂತೆ ವಿದ್ಯಾರ್ಥಿಗಳಿದ್ದರು.



ಗುಂಡ್ಲುಪೇಟೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಸಾಂಸ್ಕೃತಿಕ, ಕ್ರೀಡೆ, ರಾ.ಸೇ.ಯೋ, ರೋವರ್ಸ್ ಮತ್ತು ರೇಂಜರ್ಸ್, ರೆಡ್ ಕ್ರಾಸ್, ವಿವಿಧ ಸಮಿತಿ ಚಟುವಟಿಕೆಗಳ ಸಮಾರೋಪ ಸಮಾರಂಭವನ್ನು ಶಾಸಕ ಎಚ್.ಎಂ. ಗಣೇಶ್ ಪ್ರಸಾದ್ ಉದ್ಘಾಟಿಸಿದರು.

ಜಲಜೀವನ್ ಮಿಷನ್ ಸಮರ್ಪಕವಾಗಿ ಜಾರಿಗೊಳಿಸಿದರೆ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗುವುದಿಲ್ಲ. ಜೆಜೆಎಂ ಪೈಪ್‌ಲೈನ್ ಕಾಮಗಾರಿಗಾಗಿ ಪ್ರತಿವರ್ಷ 5 ಕೋಟಿ ರು. ಅನುದಾನ ನೀಡುತ್ತಿದ್ದರೂ ನಿರೀಕ್ಷಿತ ಪ್ರಮಾಣದಲ್ಲಿ ಅನುಷ್ಠಾನಗೊಂಡಿಲ್ಲ.

• **ಸಿ. ಪುಟ್ಟರಂಗಶೆಟ್ಟಿ** ಚಾಮರಾಜನಗರ ಶಾಸಕ

ಸುದ್ದಿ ಸಿಂಚನ

13ಕ್ಕೆ ಲೋಕಾಯುಕ್ತ ಭೇಟಿ



ಚಾಮರಾಜನಗರ: ಲೋಕಾಯುಕ್ತ ಅಧಿಕಾರಿಗಳು ಮೇ 13ರಂದು ಚಾಮರಾಜನಗರ ಪಟ್ಟಣಕ್ಕೆ ಭೇಟಿ ನೀಡಿ ಅಲ್ಲಿನ ಪ್ರವಾಸಿ ಮಂದಿರದಲ್ಲಿ ಬೆಳಗ್ಗೆ 11ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಸಾರ್ವಜನಿಕರಿಂದ ದೂರು ಅರ್ಜಿಗಳನ್ನು ಸ್ವೀಕರಿಸಲಿದ್ದಾರೆ. ಸಾರ್ವಜನಿಕರು ಕರ್ನಾಟಕ ಲೋಕಾಯುಕ್ತ ಕಾಯ್ದೆಯಡಿ ಭರ್ತಿ ಮಾಡಿ ಸಲ್ಲಿಸಿದ ದೂರು ಅರ್ಜಿಗಳನ್ನು ಸ್ವೀಕರಿಸಿ ವಿಚಾರಣೆ ನಡೆಸುವರು. ಸರ್ಕಾರಿ ಕಚೇರಿಗಳಲ್ಲಿ ಸಾರ್ವಜನಿಕ ಕೆಲಸಗಳ ಅನಗತ್ಯ ವಿಳಂಬ, ಇನ್ನಿತರ ತೊಂದರೆ ನೀಡುತ್ತಿರುವ ಸರ್ಕಾರಿ ಅಧಿಕಾರಿ ಹಾಗೂ ನೌಕರರ ವಿರುದ್ಧ ದೂರುಗಳನ್ನು ನಿಗದಿತ ನಮೂನೆ-1 ಮತ್ತು 2ರಲ್ಲಿ ನೀಡಬಹುದು. ನಾಗರಿಕರು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಕರ್ನಾಟಕ ಲೋಕಾಯುಕ್ತ ಪೊಲೀಸ್ ವಿಭಾಗದ ಉಪಾಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

12ಕ್ಕೆ ಉದ್ಯೋಗ ಮೇಳ

ಚಾಮರಾಜನಗರ: ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ, ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಹನೂರು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಮತ್ತು ಹನೂರು ತಾಲೂಕು ಪಂಚಾಯ್ತಿ ಹಾಗೂ ಚಾಮರಾಜನಗರ ವಿಶ್ವವಿದ್ಯಾನಿಲಯ ಇವರ ಸಹಯೋಗದಲ್ಲಿ ಉದ್ಯೋಗ ಮೇಳ ಕಾರ್ಯಕ್ರಮವನ್ನು ಮೇ 12ರಂದು ಬೆಳಿಗ್ಗೆ 10ರಿಂದ ಮಧ್ಯಾಹ್ನ 3ರವರೆಗೆ ಹನೂರಿನ ಶ್ರೀ ಜಿ.ವಿ ಗೌಡ ಸ್ಮಾರಕ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಆಯೋಜಿಸಲಾಗಿದೆ. ಎಸ್ ಎಸ್‌ಎಲ್‌ಸಿ, ಪಿಯುಸಿ, ಡಿಪ್ಲೊಮಾ, ಐಟಿಐ ಎಂಜಿನಿಯರಿಂಗ್ ಮತ್ತು ಯಾವುದೇ ಪದವಿ ಹಾಗೂ ಸ್ನಾತಕೋತ್ತರ ಪದವಿ ಅಭ್ಯರ್ಥಿಗಳಿಗಾಗಿ ಉದ್ಯೋಗ ಮೇಳ ಹಮ್ಮಿಕೊಳ್ಳಲಾಗಿದೆ. ಕ್ರೆಡಿಟ್ ಆಕ್ಸೆಸ್ ಗ್ರಾಮೀಣ ಲಿಮಿಟೆಡ್, ಕೇನ್ಸ್ ಟೆಕ್ನಾಲಜಿ, ಸೂರ್ಯೋದಯ ಸ್ಮಾಲ್ ಫೈನಾನ್ಸ್ ಬ್ಯಾಂಕ್, ಭಾರತ್ ಫೈನಾನ್ಷಿಯಲ್ ಇನ್‌ಕ್ಲೂಷನ್ ಲಿಮಿಟೆಡ್, ಮುತ್ತೂಟ್ ಮೈಕ್ರೋಫಿನ್, ಐಡಿಎಫ್‌ಸಿ ಫಸ್ಟ್ ಬ್ಯಾಂಕ್, ರಾಜ್ ಬಯೋ ಆರ್ಗಾನಿಕ್ಸ್, ಶಾಂತಿ ಸಿಲ್ಕ್ ಇಂಡಸ್ಟ್ರಿ, ತೇಜಸ್ವಿನಿ ಎಂಟರ್‌ಪ್ರೈಸಸ್, ಅಪೋಲೋ ಫಾರ್ಮಸಿ, ಹೋಂಡಾ, ಎಯು ಸ್ಮಾಲ್ ಫೈನಾನ್ಸ್ ಬ್ಯಾಂಕ್, ನವಭಾರತ್ ಫರ್ಟಿಲೈಸರ್ಸ್ ಲಿಮಿಟೆಡ್, ಒಬಾಳಿ ಸೌಹಾರ್ದ ಪ್ರೈವೇಟ್ ಲಿಮಿಟೆಡ್ ಕಂಪನಿಗಳು ಉದ್ಯೋಗ ಮೇಳದಲ್ಲಿ ಭಾಗವಹಿಸಲಿವೆ. ಆಸಕ್ತ ಅಭ್ಯರ್ಥಿಗಳು ತಮ್ಮ ಸ್ವ-ವಿವರ (ಬಯೋ ಡೇಟಾ) ಮತ್ತು ಅಂಕಪಟ್ಟಿಗಳ ಮೂಲ ಹಾಗೂ ಜೆರಾಕ್ಸ್ ಪ್ರತಿಗಳೊಂದಿಗೆ ಸ್ವಂತ ಖರ್ಚಿನಲ್ಲಿ ಸಂದರ್ಶನಕ್ಕೆ ಹಾಜರಾಗಬೇಕು. ಹೆಚ್ಚಿನ ಮಾಹಿತಿಗಾಗಿ 08224-200130, 08224-224430, 8105725710, 9731906898 ಸಂಪರ್ಕಿಸುವಂತೆ ಜಿಲ್ಲಾ ಉದ್ಯೋಗಾಧಿಕಾರಿ ಎ. ಮಹಮ್ಮದ್ ಅಕ್ಬರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಿಇಟಿ, ನೀಟ್ ಅಭ್ಯರ್ಥಿ ಸಾಲಕ್ಕಾಗಿ ಅರ್ಜಿ ಆಹ್ವಾನ



ಚಾಮರಾಜನಗರ: ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಅರಿವು ಸಾಲ ಯೋಜನೆಯಡಿ 2026-27ನೇ ಸಾಲಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಸಿಇಟಿ, ನೀಟ್‌ನಲ್ಲಿ ಆಯ್ಕೆಯಾಗುವ ವಿದ್ಯಾರ್ಥಿಗಳಿಗೆ ಸಾಲ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಯೋಜನೆಯಡಿ ವೈದ್ಯಕೀಯ (ಎಂಬಿಬಿಎಸ್) ಬಿಡಿಎಸ್, ಬಿಇ, ಬಿ.ಟೆಕ್, ಬ್ಯಾಚುಲರ್ ಆಫ್ ಆರ್ಕಿಟೆಕ್ಚರ್, ಬಿ.ಆಯು, ಫಾರ್ಮಸಿ, ಕೃಷಿ ವಿಜ್ಞಾನ ಮತ್ತು ಪಶು ವೈದ್ಯಕೀಯ ಕೋರ್ಸ್‌ಗಳ ವಿದ್ಯಾರ್ಥಿಗಳು (ಕ್ರಿಶ್ಚಿಯನ್ ಸಮುದಾಯವನ್ನು ಹೊರತುಪಡಿಸಿ) ವೆಬ್‌ಸೈಟ್ **https://kmdconline.karnataka.gov.in** ನಲ್ಲಿ ಮೇ 30ರೊಳಗೆ ಅರ್ಜಿ ಸಲ್ಲಿಸಬಹುದು. ನಂತರ ಅಗತ್ಯ ದಾಖಲಾತಿಗಳನ್ನು ನಗರದ ಜಿಲ್ಲಾಡಳಿತ ಭವನದ 1ನೇ ಮಹಡಿಯಲ್ಲಿರುವ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರ ಕಚೇರಿಗೆ (ಕೊಠಡಿ ಸಂ 109, 110) ಸಲ್ಲಿಸಬೇಕು. ತದನಂತರ ಬರುವ ಅರ್ಜಿಗಳನ್ನು ಸ್ವೀಕರಿಸುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ 08226-222332 ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

ಸ್ತ್ರೀ ಸೌಖ್ಯ ಕ್ಯಾನ್ಸರ್ ತಪಾಸಣಾ ಶಿಬಿರಕ್ಕೆ ಸಚಿವರ ಭೇಟಿ

ಕ್ಯಾನ್ಸರ್ ತಪಾಸಣೆ, ಚಿಕಿತ್ಸೆ ಕುರಿತು ಜಿಲ್ಲಾಧಿಕಾರಿಗಳಿಂದ ಮಾಹಿತಿ ಪಡೆದ ಕೆ. ವೆಂಕಟೇಶ್ | ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೂ ಭೇಟಿ

• **ಕನ್ನಡಪ್ರಭ ವಾರ್ತೆ** ಚಾಮರಾಜನಗರ

ಸ್ತ್ರೀ ಸೌಖ್ಯ ಕಾರ್ಯಕ್ರಮದಡಿ ಮಹಿಳೆಯರಲ್ಲಿ ಕ್ಯಾನ್ಸರ್ ಬಗ್ಗೆ ಜಾಗೃತಿ ಮೂಡಿಸಿ ಆರಂಭದಲ್ಲಿಯೇ ರೋಗ ಪತ್ತೆಹಚ್ಚಿ ಚಿಕಿತ್ಸೆ ನೀಡುವ ಸಲುವಾಗಿ ನಡೆಸಲಾಗುತ್ತಿರುವ ಕ್ಯಾನ್ಸರ್ ತಪಾಸಣಾ ಶಿಬಿರಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಕೆ. ವೆಂಕಟೇಶ್ ಅವರು ಭೇಟಿ ನೀಡಿ ವೀಕ್ಷಿಸಿದರು.

ಚಾಮರಾಜನಗರ ತಾಲೂಕಿನ ಕಾಗಲವಾಡಿಯ ಪ್ರಾಥಮಿಕ ಆರೋಗ್ಯ ಕೇಂದ್ರದ ಆವರಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯ್ತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರಿನ ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆ ಸಹಯೋಗದೊಂದಿಗೆ ಹಮ್ಮಿಕೊಳ್ಳಲಾಗಿದ್ದ ಕ್ಯಾನ್ಸರ್ ತಪಾಸಣಾ ಶಿಬಿರಕ್ಕೆ ಜಿಲ್ಲಾ ಉಸ್ತುವಾರಿ ಸಚಿವರು ಬೆಳಗ್ಗೆಯೇ ಭೇಟಿ ನೀಡಿ ವೀಕ್ಷಣೆ ಮಾಡಿದರು.

ಇದುವರೆಗೆ ಎಷ್ಟು ಕಡೆ ಇಂಥ ತಪಾಸಣಾ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ. ಶಿಬಿರದಲ್ಲಿ ಎಷ್ಟು ಮಂದಿ ನೋಂದಾಯಿಸಿಕೊಳ್ಳುತ್ತಿದ್ದಾರೆ. ತಪಾಸಣೆ, ಚಿಕಿತ್ಸೆಗೆ ಒಳಗಾಗಿರುವವರ ಸಂಖ್ಯೆ ಎಷ್ಟು ಎಂಬುದನ್ನು ಜಿಲ್ಲಾ ಉಸ್ತುವಾರಿ ಸಚಿವರು ಪ್ರಶ್ನಿಸಿ ಮಾಹಿತಿ ಪಡೆದುಕೊಂಡರು.



ಸ್ತ್ರೀ ಸೌಖ್ಯ ಕಾರ್ಯಕ್ರಮದಡಿ ಮಹಿಳೆಯರಲ್ಲಿ ಕ್ಯಾನ್ಸರ್‌ಬಗ್ಗೆ ಜಾಗೃತಿ ಮೂಡಿಸಿ ಆರಂಭದಲ್ಲಿಯೇ ರೋಗ ಪತ್ತೆಹಚ್ಚಿ ಚಿಕಿತ್ಸೆ ನೀಡುವ ಸಲುವಾಗಿ ನಡೆಸಲಾಗುತ್ತಿರುವ ಕ್ಯಾನ್ಸರ್‌ತಪಾಸಣಾ ಶಿಬಿರಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಕೆ. ವೆಂಕಟೇಶ್ ಅವರು ಭೇಟಿ ನೀಡಿ ವೀಕ್ಷಿಸಿದರು.

ಜಿಲ್ಲಾಧಿಕಾರಿ ಶ್ರೀರೂಪಾ ಅವರು ವಿವರಿಸಿ ಗರ್ಭಕಂಠಕ್ಯಾನ್ಸರ್, ಸ್ತನಕ್ಯಾನ್ಸರ್‌ತಪಾಸಣೆಯನ್ನು ಮಹಿಳೆಯರಿಗೆ ನಡೆಸಲಾಗುತ್ತಿದೆ. ಪುರುಷರಿಗೆ ಬಾಯಿ ಕ್ಯಾನ್ಸರ್ ತಪಾಸಣೆಯನ್ನೂ ಸಹ ಮಾಡಲಾಗುತ್ತಿದೆ. ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯು ಮೊಬೈಲ್ ಕ್ಯಾನ್ಸರ್ ತಪಾಸಣಾ ಘಟಕ (ಪಿಂಕ್ ಬಸ್) ದೊಂದಿಗೆ ವೈದ್ಯರು ಸಿಬ್ಬಂದಿ ಸ್ಥಳಕ್ಕೆ ಬಂದು ತಪಾಸಣೆ ಮಾಡುತ್ತಿದ್ದಾರೆ. ಈ ಘಟಕದಲ್ಲಿಯೇ ಎಲ್ಲಾ ವೈದ್ಯಕೀಯ ಪರೀಕ್ಷೆಗಳ ವ್ಯವಸ್ಥೆಗಳು ಇವೆ ಎಂದು ತಿಳಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್. ಚಿದಂಬರ ಮಾತನಾಡಿ, ಇದುವರೆಗೆ ಏರ್ಪಡಿಸಲಾಗಿರುವ ತಪಾಸಣಾ ಶಿಬಿರ, ದೊರಕುತ್ತಿರುವ ವೈದ್ಯಕೀಯ ಪರೀಕ್ಷೆ, ಔಷದ ಚಿಕಿತ್ಸೆಗಳ ಕುರಿತು ಸಚಿವರಿಗೆ ಮಾಹಿತಿ ನೀಡಿದರು.

ಕ್ಯಾನ್ಸರ್ ತಪಾಸಣೆಗಾಗಿ ಚಾಮರಾಜನಗರ ಜಿಲ್ಲೆಯು ವಿಶೇಷವಾಗಿ ರೂಪಿಸಿರುವ ಸ್ತ್ರೀ ಸೌಖ್ಯ ಕಾರ್ಯಕ್ರಮ ಯಶಸ್ವಿಯಾಗಿ ನಡೆಯಲಿ. ಜಿಲ್ಲೆಯ ಜನರಿಗೆ ಅನುಕೂಲವಾಗಲಿ ಎಂದು ಜಿಲ್ಲಾ ಉಸ್ತುವಾರಿ ಸಚಿವರು ಹೇಳಿದರು.

ಬಳಿಕ ಕಾಗಲವಾಡಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲಿಸಿದ ಜಿಲ್ಲಾ ಉಸ್ತುವಾರಿ ಸಚಿವರು, ಅಲ್ಲಿ ಜನರಿಗೆ ಒದಗಿಸಲಾಗುತ್ತಿರುವ ವೈದ್ಯಕೀಯ ಚಿಕಿತ್ಸೆ, ಸೇವೆ ಕುರಿತು ಮಾಹಿತಿ ಪಡೆದರು. ಅಲ್ಲಿನ ವೈದ್ಯರು, ಇನ್ನಿತರ ಸಿಬ್ಬಂದಿಯೊಂದಿಗೆ ಮಾತನಾಡಿ ಪ್ರತಿನಿತ್ಯ ಎಷ್ಟು ಮಂದಿ ಆರೋಗ್ಯ ಸೇವೆಗಾಗಿ ಭೇಟಿ ನೀಡುತ್ತಿದ್ದಾರೆ. ಅವರಿಗೆ ನೀಡಲಾಗುತ್ತಿರುವ ಚಿಕಿತ್ಸೆ ಉತ್ತಮವಾಗಿದೆಯೇ, ಔಷಧೋಪಾಚಾರ ಚೆನ್ನಾಗಿ ನೀಡಲಾಗುತ್ತಿದೆಯೇ ಎಂದು ಪ್ರಶ್ನಿಸಿದರು.

ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಬಂದಿದ್ದ ಸಾರ್ವಜನಿಕರೊಂದಿಗೂ ಸಚಿವರು ಮಾತನಾಡಿ, ಅಲ್ಲಿನ ಸೇವೆಯ ಬಗ್ಗೆ ತಿಳಿದುಕೊಂಡರು.

ಜಿಪಂ ಸಿಇಓ ಮೋನಾ ರೋತ್, ಎಸ್‌ಪಿ ಎಂ. ಮುತ್ತುರಾಜು, ತಹಶೀಲ್ದಾರ್ ಗಿರಿಜಾ, ಜಿಲ್ಲಾ ಅಸಾಂಕ್ರಾಮಿಕ ರೋಗಗಳ ನಿವಾರಣಾಧಿಕಾರಿ ಡಾ. ಪಿ. ಚಂದ್ರಶೇಖರ್, ಜಿಲ್ಲಾ ಕಾರ್ಯಕ್ರಮ ಅಭಿವೃದ್ಧಿ ಅಧಿಕಾರಿ ಡಾ. ರಾಜೇಶ್ ಕುಮಾರ್, ಆರೋಗ್ಯಾಧಿಕಾರಿ ಡಾ. ಶ್ರೀನಿವಾಸ್, ಡಾ. ಜನಾರ್ಧನ್, ಇತರರು ಇದ್ದರು.

ಅಜ್ಜಿ-ತಾತನಿಗೆ ಹೈಕೋರ್ಟ್‌ನಿಂದ ನಿರೀಕ್ಷಣಾ ಜಾಮೀನು ಮಂಜೂರು

ಗುಂಡ್ಲುಪೇಟೆ ತಾಲೂಕಿನ ಕಳ್ಳೀಪುರ ಗ್ರಾಮದ ಚಾಕು ಬಿಸಿ ಮಾಡಿ ಮಕ್ಕಳಿಗೆ ಬರೆ ಪ್ರಕರಣ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಚಾಕು ಬಿಸಿ ಮಾಡಿ ತಮ್ಮ ಮಕ್ಕಳ ಕೈ-ಕಾಲಿಗೆ ಬರೆ ಹಾಕಿ ಬಡಿಗೆಯಿಂದ ಬಾಸುಂಡೆ ಬರುವಂತೆ ಹೊಡೆದ ಸ್ವಂತ ತಾಯಿ, ಮಲತಂದೆ ಹಾಗೂ ಮಲತಂದೆಯ ಪೋಷಕರಿಗೆ ಹೈಕೋರ್ಟ್ ನಿರೀಕ್ಷಣಾ ಜಾಮೀನು ಮಂಜೂರು ಮಾಡಿದೆ.



ಪ್ರಕರಣಸಂಬಂಧ ನಿರೀಕ್ಷಣಾ ಜಾಮೀನು ಕೋರಿ ಚಾಮರಾಜನಗರದ ಜಿಲ್ಲೆಯ ಗುಂಡ್ಲುಪೇಟೆಯ ಕಳ್ಳೀಪುರ ಗ್ರಾಮದ ನಿವಾಸಿಗಳಾದ ಮಕ್ಕಳ ತಾಯಿ ರಂಜಿತಾ, ಮಲತಂದೆ ಕೆಂಡಗಣ್ಣಸ್ವಾಮಿ, ಆತನ ತಂದೆ ಸ್ವಾಮಿ ಮತ್ತು ರಂಜಿತಾ ಅವರ ತಾಯಿ ಮಹದೇವಮ್ಮ ಸಲ್ಲಿಸಿದ್ದ ಅರ್ಜಿ ಪುರಸ್ಕರಿಸಿದ ನ್ಯಾ.ವಿ. ಶ್ರೀಶಾನಂದ ಅವರ ಪೀಠ ಈ ಆದೇಶ ಮಾಡಿದೆ.

ಅರ್ಜಿದಾರರು ಈಗಾಗಲೇ ತನಿಖಾಧಿಕಾರಿ ಮುಂದೆ ಹಾಜರಾಗಿ ತಮ್ಮ ಹೇಳಿಕೆ ದಾಖಲಿಸಿದ್ದಾರೆ. ಆ ಮೂಲಕ ತನಿಖೆಗೆ ಸಹಕರಿಸಿದ್ದಾರೆ. ತನಿಖಾಧಿಕಾರಿ ತನಿಖೆ ಪೂರ್ಣಗೊಳಿಸಿ ಸಂಬಂಧಿಸಿದ ವಿಚಾರಣಾ ನ್ಯಾಯಾಲಯಕ್ಕೆ ದೋಷಾರೋಪಣೆ ಪಟ್ಟಿ ಸಲ್ಲಿಸಿದ್ದಾರೆ. ಚಾರ್ಜ್‌ಶೀಟ್ ಪ್ರಕಾರ ಅರ್ಜಿದಾರರ ಬಂಧನ ಅಗತ್ಯವಿರುವುದು ಕಂಡುಬರುತ್ತಿಲ್ಲ. ಹಾಗಾಗಿ, ನಿರೀಕ್ಷಣಾ ಜಾಮೀನು ಮಂಜೂರು ಮಾಡಲಾಗುತ್ತಿದೆ ಎಂದು ಪೀಠ ಆದೇಶಿಸಿದೆ.

ಜೊತೆಗೆ ಅರ್ಜಿದಾರರು ತಲಾ 50 ಸಾವಿರು ರು. ವೈಯಕ್ತಿಕ ಬಾಂಡ್ ಮತ್ತು ಅಷ್ಟೇ ಮೊತ್ತಕ್ಕೆ ಒಬ್ಬರ ಭದ್ರತಾ ಖಾತರಿ ಒದಗಿಸಬೇಕು. ಸಾಕ್ಷ್ಯಾಧಾರಗಳನ್ನು ತಿರುಚಲು ಹಾಗೂ ನಾಶಪಡಿಸಲು ಯತ್ನಿಸಬಾರದು. 1 ವಾರದೊಳಗೆ ವಿಚಾರಣಾ ನ್ಯಾಯಾಲಯದ ಮುಂದೆ ಹಾಜರಾಗಬೇಕು. ನ್ಯಾಯಾಲಯದ ಪೂರ್ವಾನುಮತಿ ಪಡೆಯದೇ ಚಾಮರಾಜನಗರ ಜಿಲ್ಲೆಯನ್ನು ತೊರೆಯಬಾರದು ಎಂದು ನ್ಯಾಯಪೀಠವು ಅರ್ಜಿದಾರರಿಗೆ ಷರತ್ತು ವಿಧಿಸಿದೆ.

ಮಕ್ಕಳ ಮೊದಲ ತಂದೆ ನಂಜೇಗೌಡರ ತಂದೆ ಮಾದೇಗೌಡ ನೀಡಿದ ಮಾಹಿತಿ ಆಧರಿಸಿ ಚಾಮರಾಜನಗರ ಜಿಲ್ಲೆಯ ಮಕ್ಕಳ ಸಂರಕ್ಷಣಾ ಘಟಕದ ಸಮನ್ವಯಾಧಿಕಾರಿ ಎಲ್. ಸಿದ್ದರಾಜು 2025ರ ಡಿ.4ರಂದು ಚಾಮರಾಜನಗರ ಮಹಿಳಾ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ಅದರನ್ವಯ ಪೊಲೀಸರು ಎಫ್‌ಐಆರ್ ದಾಖಲಿಸಿದ್ದರು.

ಎಫ್‌ಐಆರ್ ಸಾರಾಂಶ: ರಂಜಿತಾ ತಮ್ಮ ಮೊದಲ ಪತಿ ನಂಜೇಗೌಡರಿಂದ 1 ಗಂಡು (ಸದ್ಯ 6 ವರ್ಷ), 1 ಹೆಣ್ಣು (4 ವರ್ಷ) ಮಗು ಪಡೆದಿದ್ದರು. ಮೊದಲ ಪತಿ 2024ರ ಮಾರ್ಚ್‌ನಲ್ಲಿ ನಿಧನರಾದ ನಂತರ ಕಳ್ಳೀಪುರ ಗ್ರಾಮದ ಕೆಂಡಗಣ್ಣ ಸ್ವಾಮಿ ಅವರನ್ನು ರಂಜಿತಾ ಎರಡನೇ ಮದುವೆಯಾಗಿದ್ದರು. ದಂಪತಿ ಕಳ್ಳೀಪುರದಲ್ಲೇ ಮಕ್ಕಳೊಂದಿಗೆ ನೆಲೆಸಿದ್ದರು. ಕೆಂಡಗಣ್ಣ ಸ್ವಾಮಿ 2025ರ ಸೆ.15ರಿಂದ ಅ.2ರವರ ನಡುವೆ ಮದ್ಯ ಸೇವಿಸಿ ಬಂದು ಮಕ್ಕಳಿಗೆ ಹೊಡೆಯುತ್ತಿದ್ದರು. ಕೈ-ಕಾಲು, ಬೆನ್ನು ಮೇಲೆ ಚಾಕು ಬಿಸಿ ಮಾಡಿ ಬರೆ ಇಟ್ಟಿದ್ದರು. ತಲೆಗೆ ಹೊಡೆದಿದ್ದರು. ಕಾಲಿನಿಂದ ಒದ್ದಿದ್ದರು. ಮೇಲಕ್ಕೆತ್ತಿ ನೆಲಕ್ಕೆ ಕುಕ್ಕಿದ್ದರು. ಬೆನ್ನಿಗೆ ಬಾಸುಂಡೆ ಬರುವಂತೆ ಕಡ್ಡಿಯಿಂದ ಹೊಡೆದಿದ್ದಾರೆ. ಕೆಂಡಗಣ್ಣ ತಂದೆ ಸ್ವಾಮಿ ಮದ್ಯಪಾನ ಮಾಡಿ ಬಂದು ಮಹದೇವಮ್ಮ, ಮಕ್ಕಳನ್ನು ತಾಯಿ ರಂಜಿತಾ ಅವರೊಂದಿಗೆ ಇರಲು ಬಿಡದೆ, ಹೊಡೆದು ಬಲವಂತವಾಗಿ ತಮ್ಮ ಬಳಿ ಮಲಗಿಸಿಕೊಳ್ಳುತ್ತಿದ್ದರು ಎಂದು ಎಫ್‌ಐಆರ್‌ನಲ್ಲಿ ಆರೋಪಿಸಲಾಗಿತ್ತು. ಆರೋಪಿಗಳಿಗೆ ಚಾಮರಾಜನಗರದ ಜಿಲ್ಲಾ ಪ್ರಧಾನ ಸಿವಿಲ್ (ಹಿರಿಯ) ಮತ್ತು ಸಿಜೆಎಂ ನ್ಯಾಯಾಲಯ ನಿರೀಕ್ಷಣಾ ಜಾಮೀನು ನಿರಾಕರಿಸಿ 2026ರ ಜ.12ರಂದು ಆದೇಶಿಸಿತ್ತು.

ಗುಂಡ್ಲುಪೇಟೆಯ 19 ಗ್ರಾಪಂ ಕ್ಷಯ ರೋಗ ಮುಕ್ತ: ಡಾ. ಅಲೀಂ ಪಾಷ

ಮೇಲುಕಾಮನಹಳ್ಳಿಯಲ್ಲಿ ಆರೋಗ್ಯ ತಪಾಸಣೆ ಶಿಬಿರದಲ್ಲಿ ಟಿಎಚ್‌ಓ ಘೋಷಣೆ

• **ಕನ್ನಡಪ್ರಭ ವಾರ್ತೆ** ಗುಂಡ್ಲುಪೇಟೆ

ತಾಲೂಕಿನ 34 ಗ್ರಾಪಂಗಳ ಪೈಕಿ 19 ಗ್ರಾಪಂಗಳು ಕ್ಷಯ ಮುಕ್ತವಾಗಿವೆ ಎಂದು ತಾಲೂಕು ಆರೋಗ್ಯಾಧಿಕಾರಿ ಡಾ.ಬಿ.ಆರ್. ಅಲಿಂ ಪಾಷ ಹೇಳಿದರು.

ತಾಲೂಕಿನ ಮೇಲುಕಾಮನಹಳ್ಳಿ ಗ್ರಾಮದಲ್ಲಿ ರಾಷ್ಟ್ರೀಯ ಕ್ಷಯ ರೋಗ ನಿರ್ಮೂಲನ ಕಾರ್ಯಕ್ರಮದಡಿ 100 ದಿನಗಳ ಕ್ಷಯರೋಗ ನಿರ್ಮೂಲನ ಅಭಿಯಾನದ ಅಂಗವಾಗಿ ಆರೋಗ್ಯ ತಪಾಸಣಾ ಶಿಬಿರದಲ್ಲಿ ಮಾತನಾಡಿದರು.

ಆರೋಗ್ಯ ಶಿಬಿರದಲ್ಲಿ 61 ಮಂದಿಗೆ ರಕ್ತ ದೊತ್ತಡ, ಎಚ್‌ಬಿ, ಸಕ್ಕರೆ ಕಾಯಿಲೆ, ಕ್ಷಯರೋಗ ತಪಾಸಣೆಗಾಗಿ ಕಫ ಪರೀಕ್ಷೆ ಹಾಗೂ ವಿಶೇಷವಾಗಿ ಪೋರ್ಟಲ್ ಎಕ್ಸ್ ರೇ ಡಿವೈಸ್‌ನಲ್ಲಿ ತೆಗೆಯುವ ಎಕ್ಸ್ ರೇಗಳನ್ನು ಮಾಡಲಾಗಿದೆ ಎಂದರು.

2 ವಾರಕಿಂತ ಹೆಚ್ಚು ಕೆಮ್ಮು, ಜ್ವರ, ತೂಕ ಕಡಿಮೆಯಾಗುವುದು, ಹಸಿವಾಗದೆ ಇರುವುದು, ಕಫದಲ್ಲಿ ರಕ್ತದಲ್ಲಿ ಕ್ಷಯರೋಗದ ಲಕ್ಷಣಗಳಾಗಿದ್ದು, ಈ ರೀತಿಯ ಲಕ್ಷಣಗಳು ಕಂಡು ಬಂದಲ್ಲಿ ಸರ್ಕಾರಿ ಆಸ್ಪತ್ರೆಯಲ್ಲಿ ಕಫ ಪರೀಕ್ಷೆಗಳನ್ನು ಸಾರ್ವಜನಿಕರು ಮಾಡಿಸಿಕೊಳ್ಳಬೇಕು ಎಂದು ಮನವಿ ಮಾಡಿದರು.



ಗುಂಡ್ಲುಪೇಟೆ ತಾಲೂಕಿನ ಮೇಲುಕಾಮನಹಳ್ಳಿಯಲ್ಲಿ ಕ್ಷಯರೋಗ ನಿರ್ಮೂಲನ ಅಭಿಯಾನದಲ್ಲಿ ತಾಲೂಕು ಆರೋಗ್ಯಾಧಿಕಾರಿ ಡಾ.ಬಿ.ಆರ್. ಅಲಿಂ ಪಾಷ ಚಾಲನೆ ನೀಡಿದರು.

ಗುಂಡ್ಲುಪೇಟೆ ತಾಲೂಕನ್ನಾಗಿ ಮಾಡುವ ಗುರಿಯ ಜೊತೆಗೆ ಬುಡಕಟ್ಟು ಜನಾಂಗದ ಆರೋಗ್ಯದ ಬಗ್ಗೆಯು ವಿಶೇಷ ಕಾಳಜಿ ಹೊಂದಲಾಗಿದೆ ಎಂದರು. ಆರೋಗ್ಯ ತಪಾಸಣಾ ಕಾರ್ಯಕ್ರಮದಲ್ಲಿ ಮಂಗಲ ಪ್ರಾಥಮಿಕ ಆರೋಗ್ಯದ ವೈದ್ಯರು ಹಾಗೂ ಆರೋಗ್ಯ ಸಿಬ್ಬಂದಿಗಳಿದ್ದರು.


ಚಿರತೆ ಮರಿ ರಕ್ಷಿಸಿದ ವಡ್ಡಗೆರೆ ರೈತರು

ಜನರ ಕಂಡು ಮತ್ತೊಂದು ಮರಿ ಚಿರತೆ ಪರಾರಿ | ತಾಯಿ ಬಳಿ ಸೇರಿಸಲು ಯತ್ನ

• **ಕನ್ನಡಪ್ರಭ ವಾರ್ತೆ** ಗುಂಡ್ಲುಪೇಟೆ

ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಕುಂದಕೆರೆ ವಲಯದಂಚಿನ ವಡ್ಡಗೆರೆ ಗ್ರಾಮದ ರೈತ ನಾಗಪ್ಪ ವಡ್ಡಗೆರೆಗೆ ಸೇರಿದ ಜಮೀನಿನ ಕೃಷಿ ಹೊಂಡದ ಬಳಿ ಕಾಣಿಸಿಕೊಂಡ 2 ಚಿರತೆ ಮರಿಗಳಲ್ಲಿ 1 ಮರಿಯನ್ನು ರೈತರು ರಕ್ಷಿಸಿ ಅರಣ್ಯ ಇಲಾಖೆಗೆ ಒಪ್ಪಿಸಿದ್ದಾರೆ.

ರೈತ ನಾಗಪ್ಪ ವಡ್ಡಗೆರೆ ಜಮೀನಿನ ಕೃಷಿ ಹೊಂಡದ ಪೈಪ್‌ನಲ್ಲಿ ಚಿರತೆ ಮರಿಗಳು ಕಾಣಿಸಿಕೊಂಡಿವೆ. ಚಿರತೆ ಮರಿ ಕಂಡ ರೈತರು ಮರಿ ಬಳಿಗೆ ಹೋದಾಗ 1 ಚಿರತೆ ಮರಿ ಪರಾರಿಯಾಗಿದ್ದು, ಸ್ಥಳದಲ್ಲಿ ಸಿಕ್ಕ ಮರಿಯನ್ನು ಪ್ಲಾಸ್ಟಿಕ್ ಚೀಲದಲ್ಲಿ ಕೂಡಿ ಕುಂದಕೆರೆ ಅರಣ್ಯ ಇಲಾಖೆ ಸಿಬ್ಬಂದಿಗೆ ಒಪ್ಪಿಸಿದ್ದಾರೆ. 2 ಚಿರತೆ ಮರಿಗಳಿದ್ದ ಸ್ಥಳದಲ್ಲಿಯೇ ತಾಯಿ ಚಿರತೆ ಕೂಡ ಇತ್ತು ಎನ್ನಲಾಗಿದೆ. ರೈತರು ರಕ್ಷಿಸಿದ ಚಿರತೆ ಮರಿಯನ್ನು ಶುಕ್ರವಾರ ರಾತ್ರಿ ತಾಯಿ ಚಿರತೆ ಬಳಿಗೆ ಬಿಡಲು ಅರಣ್ಯ ಇಲಾಖೆ ಚಿಂತನೆ ನಡೆಸಿದೆ ಎಂದು ವಲಯ ಅರಣ್ಯಾಧಿಕಾರಿ ಎಚ್.ಎನ್. ನಾಗೇಂದ್ರ ನಾಯಕ್ ಮಾಹಿತಿ ನೀಡಿದರು. ಶುಕ್ರವಾರ ಸಂಜೆ ಥರ್ಮಲ್ ದ್ರೋನ್ ಮೂಲಕ ತಾಯಿ ಚಿರತೆ ಪತ್ತೆ ಹಚ್ಚಿದ್ದಾರೆ. ಜೊತೆಗೆ ಮತ್ತೊಂದು ಚಿರತೆ ಮರಿ ಕೂಡ ಕಾಣಿಸಿಕೊಂಡಿದೆ. ರೈತರು ರಕ್ಷಿಸಿದ ಚೀಲದಲ್ಲಿರುವ ಚಿರತೆ ಮರಿಯನ್ನು ತಾಯಿ ಚಿರತೆ ಬಿಡುವುದಕ್ಕೆ ಪ್ರಯತ್ನಿಸಲಾಗುವುದು ಎಂದರು.



ಸ್ತ್ರೀಯರ ಸ್ವಾವಲಂಬನೆಗೆ ಐಎಚ್‌ಡಿಯುಎ ಪ್ರಯತ್ನ

• **ಕನ್ನಡಪ್ರಭ ವಾರ್ತೆ** ಗುಂಡ್ಲುಪೇಟೆ

ಅಂತಾರಾಷ್ಟ್ರೀಯ ಮಾನವ ಅಭಿವೃದ್ಧಿ ಮತ್ತು ಏಳಿಗೆ ಸಂಸ್ಥೆ (ಐಎಚ್‌ಡಿಯುಎ) ಮಹಿಳೆಯರಿಗೆ ಕೌಶಲ್ಯ ತರಬೇತಿ ನಡೆಸುವ ಮೂಲಕ ಸ್ವಾವಲಂಬಿಯಾಗಲು ಪ್ರಯತ್ನಿಸುತ್ತಿದೆ ಎಂದು ಲೀಡ್ ಬ್ಯಾಂಕ್ ವ್ಯವಸ್ಥಾಪಕಿ ಸುರೇಖಾ ಹೇಳಿದರು.

ಗುಂಡ್ಲುಪೇಟೆ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ ಹರವೆ ಗ್ರಾಮದಲ್ಲಿ ಡಾ.ಬಿ.ಎಸ್. ಅಜಯ್ ಕುಮಾರ್ ನೇತೃತ್ವದ ಅಂತಾರಾಷ್ಟ್ರೀಯ ಮಾನವ ಅಭಿವೃದ್ಧಿ ಮತ್ತು ಏಳ್ಗೆ ಸಂಸ್ಥೆಯು ಚಾಮರಾಜನಗರ ನಬಾರ್ಡ್ ಸಹಯೋಗದಲ್ಲಿ ಕೌಶಲ್ಯ ಅಭಿವೃದ್ಧಿ ಯೋಜನೆಯಡಿಯಲ್ಲಿ ಆರಿಎಂಬ್ರಾಯ್ಡರಿ ತರಬೇತಿ ಉದ್ಘಾಟಿಸಿ ಮಾತನಾಡಿದರು.

ಪ್ರಾದೇಶಿಕ ವ್ಯವಸ್ಥಾಪಕಿ ತ್ರಿವೇಣಿ ಮಾತನಾಡಿ, ಮಹಿಳೆಯರಲ್ಲಿ ಆತ್ಮವಿಶ್ವಾಸ ಹೆಚ್ಚಿ ಜೀವನ ಮಟ್ಟ ಸುಧಾರಿಸುತ್ತದೆ. ಈ ನಿಟ್ಟಿನಲ್ಲಿ ಸಂಸ್ಥೆಯು ನಿರಂತರವಾಗಿ ಯೋಜನೆ ರೂಪಿಸಿ ಅನುಷ್ಠಾನಗೊಳಿಸುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ನಬಾರ್ಡ್ ಡಿಡಿಎಂ ಹಿತಾ ಸುವರ್ಣ ಮಾತನಾಡಿ, ಅಂತಾರಾಷ್ಟ್ರೀಯ ಮಾನವ ಅಭಿವೃದ್ಧಿ ಮತ್ತು ಏಳ್ಗೆ ಸಂಸ್ಥೆಯು ಈ ಭಾಗದಲ್ಲಿ ಸಮುದಾಯದ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡುತ್ತಿದೆ. ಅಲ್ಲದೇ ಹಲವು ಯೋಜನೆ ಅನುಷ್ಠಾನಗೊಳಿಸುತ್ತಿದೆ ಎಂದರು. ಅಂತಾರಾಷ್ಟ್ರೀಯ ಮಾನವ ಅಭಿವೃದ್ಧಿ ಮತ್ತು ಏಳ್ಗೆ ಸಂಸ್ಥೆಯ ಕಲಾವತಿ ಮಾತನಾಡಿ, ಸಂಸ್ಥೆಯ ಕಾರ್ಯ ಚಟುವಟಿಕೆಗಳ ಬಗ್ಗೆ ತಿಳಿಸಿದರು.

ಕರ್ನಾಟಕ ಗ್ರಾಮೀಣ ಬ್ಯಾಂಕ್ ವ್ಯವಸ್ಥಾಪಕ ಸಾಯಿರಾಂ ಹಾಗೂ ತರಬೇತುದಾರರಾದ ಪಲ್ಲವಿ ಸೇರಿದಂತೆ ಸಂಸ್ಥೆಯ ಸದಸ್ಯರು ಇದ್ದರು.

ಪಾಳ್ಯ ಪ್ಯಾಕ್ಸ್‌ಗೆ ರವಿ ನೂತನ ಅಧ್ಯಕ್ಷರಾಗಿ ಅವಿರೋಧ ಆಯ್ಕೆ



• **ಕನ್ನಡಪ್ರಭ ವಾರ್ತೆ** ಕೊಳ್ಳೇಗಾಲ

ಪಾಳ್ಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಬಿ. ರವಿ, ಉಪಾಧ್ಯಕ್ಷರಾಗಿ ನಂಜುಂಡಸ್ವಾಮಿ ಅವರು ಶುಕ್ರವಾರ ನಡೆದ ಚುನಾವಣೆಯಲ್ಲಿ ಅವಿರೋಧವಾಗಿ ಆಯ್ಕೆಯಾದರು.

ತಾಲೂಕಿನ ಪಾಳ್ಯ ಗ್ರಾಮದ ಸೊಸೈಟಿಯಲ್ಲಿ ನಡೆದ ಚುನಾವಣೆಯಲ್ಲಿ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರ ಸ್ಥಾನಕ್ಕೆ ಒಂದೊಂದೇ ನಾಮಪತ್ರ ಸಲ್ಲಿಕೆಯಾದ ಹಿನ್ನೆಲೆ ಅವಿರೋಧವಾಗಿ ಆಯ್ಕೆಯಾದರು ಎಂದು ಚುನಾವಣಾಧಿಕಾರಿ ನಾಗೇಶ್ ಘೋಷಣೆ ಮಾಡಿದರು.

ಬಳಿಕ ನೂತನ ಅಧ್ಯಕ್ಷ ಬಿ. ರವಿ ಮಾತನಾಡಿ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷನಾಗಲು ನನ್ನನ್ನು ಆಯ್ಕೆ ಮಾಡಲು ಕಾರಣರಾದ ಎಲ್ಲಾ ನಿರ್ದೇಶಕರು ಹಾಗೂ ಮುಖಂಡರಿಗೂ ಧನ್ಯವಾದ ಸಲ್ಲಿಸುತ್ತೇನೆ ಎಂದರು.

ನನ್ನ ಅವಧಿಯಲ್ಲಿ ಸಹಕಾರ ಕ್ಷೇತ್ರದಲ್ಲಿ ರೈತರಿಗೆ ನ್ಯಾಯ ಒದಗಿಸಲು ಶ್ರಮಿಸುವುದಾಗಿ ತಿಳಿಸಿ, ಜೊತೆಗೆ ಕೃಷಿ ಸಹಕಾರ ಸಂಘದ ಬಲವರ್ಧನೆಗೆ ಶ್ರಮಿಸುವುದಾಗಿ ಹೇಳಿದರು.

ಕೈ-ಕಮಲ ನಾಯಕರ ಸೇರ್ಪಡೆಯಿಂದ ಆನೆಬಲ: ಶಾಸಕ

ಹನೂರಿನ ಬಿಜೆಪಿ, ಕಾಂಗ್ರೆಸ್ ಕಾರ್ಯಕರ್ತರು ಶಾಸಕ ಎಂ.ಆರ್. ಮಂಜುನಾಥ್ ಸಮ್ಮುಖದಲ್ಲಿ ಜೆಡಿಎಸ್‌ಗೆ ಸೇರ್ಪಡೆ; ಆತ್ಮೀಯ ಸ್ವಾಗತ

• **ಕನ್ನಡಪ್ರಭ ವಾರ್ತೆ** ಹನೂರು

ಹಲವರು ಹನೂರು ತಾಲೂಕಿನ ಸರ್ವಾಂಗೀಣ ಅಭಿವೃದ್ಧಿಗೆ ಕಾಂಗ್ರೆಸ್ ಮತ್ತು ಬಿಜೆಪಿ ಪಕ್ಷಗಳ ತೊರೆದು ಜೆಡಿಎಸ್ ಪಕ್ಷಕ್ಕೆ ಸೇರ್ಪಡೆಯಾಗಿರುವುದು ಆನೆ ಬಲ ಬಂದಂತಾಗಿದೆ ಎಂದು ಶಾಸಕ ಎಂ. ಆರ್. ಮಂಜುನಾಥ್ ಅಭಿಮತ ವ್ಯಕ್ತಪಡಿಸಿದರು. ಹನೂರು ಪಟ್ಟಣದ ಶಾಸಕರ ಕಚೇರಿ ಮುಂಭಾಗ ಆಯೋಜಿಸಲಾಗಿದ್ದ ಕಾಂಗ್ರೆಸ್ ಮತ್ತು ಬಿಜೆಪಿ ಪಕ್ಷದ ಮುಖಂಡರುಗಳ ಜೆಡಿಎಸ್ ಪಕ್ಷಕ್ಕೆ ಸೇರ್ಪಡೆ ಕಾರ್ಯಕ್ರಮದಲ್ಲಿ ಅವರು ಮುಖಂಡರ ಹಾಗೂ ಕ್ಷೇತ್ರದ ಜನತೆಯ ಉದ್ದೇಶಿಸಿ ಮಾತನಾಡಿದರು.ವಿವಿಧ ಪಕ್ಷಗಳಲ್ಲಿ ದೀರ್ಘಕಾಲವಾಗಿ ಇದ್ದಂತ ಮುಖಂಡರುಗಳು ಜೆಡಿಎಸ್ ಪಕ್ಷಕ್ಕೆ ಸೇರ್ಪಡೆ ಆಗಿರುವುದು ಆನೆ ಬಲ ಬಂದಂತಾಗಿದೆ. ತಾಲೂಕಿನ ಸಮಗ್ರ ಸರ್ವಾಂಗೀಣ ಅಭಿವೃದ್ಧಿಗೆ ಜನತೆಯ ಋಣ ತೀರಿಸಲು ಒಳ್ಳೆಯ ಅವಕಾಶ ನೀಡಿದ್ದೀರಾ ಅದನ್ನು ಬಳಸಿಕೊಂಡು ಉತ್ತಮ ಕೆಲಸ ಮಾಡಲು ಬದ್ಧನಾಗಿದ್ದೇನೆ ಎಂದು ತಿಳಿಸಿದರು.

ಶಾಸಕನಾಗಿ ಮಾರ್ಚ್ 3ಕ್ಕೆ ಮೂರು ವರ್ಷವಾಗಿದ್ದು, ಮುಂದಿನ ದಿನಗಳಲ್ಲಿ ಉತ್ತಮ ಫಲಿತಾಂಶಕ್ಕಾಗಿ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಹೆಚ್ಚಿನ ಹೊತ್ತು ನೀಡುವ ಮೂಲಕ ಹಗಲಿರುಳು ಶ್ರಮಿಸುತ್ತಿದ್ದೇನೆ. ಕ್ಷೇತ್ರದ ಜನತೆಗೆ ನನ್ನ ಮೇಲೆ ಇಟ್ಟಿರುವ ನಂಬಿಕೆಯ ಫಲವಾಗಿ ಕ್ಷೇತ್ರಕ್ಕೆ ವಿದ್ಯುತ್, ರಸ್ತೆ ,ಕುಡಿಯುವ ನೀರು, ರೈತರಿಗೆ ನೀರಾವರಿ ಯೋಜನೆಗಳಿಗೆ ಬೇಕಾದಂತ ಜನಪರ ಕಾರ್ಯಕ್ರಮಗಳನ್ನು ನೀಡುವ ಮೂಲಕ ಶ್ರಮಿಸುತ್ತಿದ್ದೇನೆ ಎಂದರು.



ಹನೂರು ಪಟ್ಟಣದಲ್ಲಿ ಕಾಂಗ್ರೆಸ್, ಬಿಜೆಪಿ ಮುಖಂಡರು ಪಕ್ಷ ತೊರೆದು ಜೆಡಿಎಸ್ ಪಕ್ಷಕ್ಕೆ ಸೇರ್ಪಡೆಗೊಂಡ ಕಾರ್ಯಕ್ರಮದಲ್ಲಿ ಶಾಸಕ ಮಂಜುನಾಥ್ ಮಾತನಾಡಿದರು.

ಮಾದಪ್ಪನಬಳಿ ಇದೆ ಲೆಕ್ಕ: ಕ್ಷೇತ್ರದ ಅಧಿಪತಿ ಮಾದಪ್ಪನ ಬಳಿಯಲ್ಲಿ ದಿನನಿತ್ಯ ನಾನು ಮಾಡುತ್ತಿರುವ ಕೆಲಸ ಕಾರ್ಯಗಳ ಬಗ್ಗೆ ಲೆಕ್ಕ ನೀಡುತ್ತಿದ್ದೇನೆ. ಹೀಗಾಗಿ ಕ್ಷೇತ್ರದ ಜನತೆಗೆ ಬೇಕಾದ ಅಭಿವೃದ್ಧಿ ಕಾರ್ಯಗಳ ಬಗ್ಗೆ ಹೆಚ್ಚಿನ ಕಾಳಜಿ ವಹಿಸುವ ಮೂಲಕ ಜನಸಾಮಾನ್ಯರ ಕೆಲಸ ಕಾರ್ಯಗಳಿಗೆ ಒತ್ತು ನೀಡುವ ಮೂಲಕ ಮುಂದಿನ ಪೀಳಿಗೆಗಾಗಿ ಕ್ಷೇತ್ರದ ಉದ್ದಗಲಕ್ಕೂ ಮೂಲಭೂತ ಸೌಲಭ್ಯಗಳ ಕಲ್ಪಿಸಲು ಶ್ರಮಿಸುತ್ತಿದ್ದೇನೆ. ಹೀಗಾಗಿ ನಿಮ್ಮೆಲ್ಲರ ಸಹಕಾರದೊಂದಿಗೆ ಉತ್ತಮ ಕೆಲಸ ಮಾಡಲು ವಿವಿಧ ಪಕ್ಷದ ಮುಖಂಡರುಗಳು ಜೆಡಿಎಸ್ ಪಕ್ಷಕ್ಕೆ ಸೇರ್ಪಡೆಯಾಗಿರುವುದು ಶ್ಲಾಘನೀಯ ವಿಚಾರವಾಗಿದೆ ಎಂದರು.

ಕೌದಳ್ಳಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ನಾಗರಾಜ ಮಾತನಾಡಿ, ಕಳೆದ 70 ವರ್ಷದಿಂದ ಕಾಂಗ್ರೆಸ್ ಪಕ್ಷದಲ್ಲಿ ತನು ಮನ ಧನ ಅರ್ಪಿಸುವ ಮೂಲಕ ಉತ್ತಮ ಕೆಲಸಗಳನ್ನು ಮಾಡುತ್ತಿದ್ದಂತ ಸಮುದಾಯದ ಮುಖಂಡರನ್ನು ಕಾಂಗ್ರೆಸ್‌ನ ಮಾಜಿ ಶಾಸಕರು ಸರಿಯಾಗಿ ನಡೆಸಿಕೊಳ್ಳುತ್ತಿಲ್ಲ. ಹೀಗಾಗಿ ಹಾಲಿ ಶಾಸಕರ ಸರಳತೆ ಹಾಗೂ ಜನಸಾಮಾನ್ಯರ ಕೆಲಸ ಕಾರ್ಯಗಳಿಗೆ ಸ್ಪಂದಿಸುವುದನ್ನು ಮೆಚ್ಚಿ ಕಾಂಗ್ರೆಸ್ ಪಕ್ಷವನ್ನು ತೊರೆದು ಜೆಡಿಎಸ್ ಪಕ್ಷಕ್ಕೆ ಸೇರ್ಪಡೆಗೊಳ್ಳುತ್ತಿದ್ದೇವೆ ಮುಂದಿನ ದಿನಗಳಲ್ಲಿ ಪಕ್ಷದ ಪರವಾಗಿ ವಿಶ್ವಾಸದಿಂದ ಕೆಲಸ ನಿರ್ವಹಿಸುತ್ತೇವೆ ಎಂದು ತಿಳಿಸಿದರು. ಇದೇ ಸಂದರ್ಭದಲ್ಲಿ ಕೆಂಚಪ್ಪ ಹಾಗೂ ಚಂಗವಾಡಿ ರಾಚಪ್ಪ ಸೇರಿದಂತೆ ವಿವಿಧ ಗ್ರಾಮದ ಮುಖಂಡರು ಕಾಂಗ್ರೆಸ್ ಮತ್ತು ಬಿಜೆಪಿ ಪಕ್ಷಗಳನ್ನು ತೊರೆದು ಜೆಡಿಎಸ್ ಪಕ್ಷಕ್ಕೆ ಸೇರ್ಪಡೆಗೊಂಡರು ಪಕ್ಷದ ಸಾಲು ಹಾಕಿ ಸನ್ಮಾನಿಸಿ ಕಾರ್ಯಕ್ರಮದಲ್ಲಿ ಗೌರವಿಸಿದರು. ಇದೇ ಸಂದರ್ಭದಲ್ಲಿ ಚಾಮುಲ್ ನಿರ್ದೇಶಕ ಮಹದೇವ್ ಪ್ರಸಾದ್, ಚಾಮುಲ್ ಮಾಜಿ ಅಧ್ಯಕ್ಷ ಗುರುಮಲ್ಲಪ್ಪ ಮತ್ತು ಮುಖಂಡರಾದ ನಾಗೇಂದ್ರ, ಬಾಬು, ರಾಜೇಗೌಡ, ರಾಜಶೇಖರ ಮೂರ್ತಿ, ವಿಜಯ್ ಕುಮಾರ್, ಸೀನಣ್ಣ, ಸಿದ್ದರಾಜು, ನಟರಾಜ್ ಗೌಡ, ಸ್ವಾಮಿ ಇತರರಿದ್ದರು.

ನಾನೇ ಇಲ್ಲದೇ ಘಟನೆಯಲ್ಲಿ ನನ್ನ ವಿರುದ್ಧ ಸುಳ್ಳು ಕೇಸ್: ರೈತ ಮುಖಂಡ ವೆಂಕಟೇಶ್

• **ಕನ್ನಡಪ್ರಭ ವಾರ್ತೆ** ಹನೂರು

ಪ್ರಕರಣದಲ್ಲಿ ನಾವಿಲ್ಲದಿದ್ದರೂ ಸಹ ನಮ್ಮ ಮೇಲಿನ ವೈಯಕ್ತಿಕ ದ್ವೇಷದಿಂದ ಪೊಲೀಸ್ ಠಾಣೆಯಲ್ಲಿ ನಮ್ಮ ಮೇಲೆ ದೂರು ದಾಖಲಾಗಿರುವುದು ಸತ್ಯಕ್ಕೆ ದೂರವಾಗಿದೆ ಎಂದು ಕರ್ನಾಟಕ ರಾಜ್ಯ ರೈತ ಸಂಘದ ಸದಸ್ಯ ಕೂಡಲೂರು ವೆಂಕಟೇಶ್ ಹೇಳಿದ್ದಾರೆ.

ಪಟ್ಟಣದ ಲೋಕೋಪಯೋಗಿ ಇಲಾಖೆ ವಸತಿ ಗೃಹದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ಇತ್ತೀಚಿಗೆ ಮಾರ್ಟಳ್ಳಿ ಗ್ರಾಮದಲ್ಲಿ ನಡೆದ ವೈಯಕ್ತಿಕ ಘಟನೆಗೆ ಸಂಬಂಧಪಟ್ಟಂತೆಸಂಬಂಧಪಟ್ಟವರಮೇಲೆಪೊಲೀಸ್‌ಪ್ರಕರಣದಾಖಲಾಗಿದೆ. ಆದರೆ ಆ ಘಟನೆಗೆ ಆ ದಿನ ನಾವು ಇಲ್ಲದಿದ್ದರೂ ಸಹ ನಮ್ಮ ಹೆಸರನ್ನು ಘಟನೆಗೆ ಒಳಪಡಿಸಿ ನಮ್ಮ ಮೇಲೆ ಸುಳ್ಳು ಪ್ರಕರಣವನ್ನು ದಾಖಲು ಮಾಡಿದ್ದಾರೆ. ಹಾಗಾಗಿ ನಮಗೆ ನ್ಯಾಯ ಕೊಡಬೇಕು ಎಂದು ಮನವಿ ಮಾಡಿದರು. ಕರ್ನಾಟಕ ರಾಜ್ಯ ರೈತ ಸಂಘದ ಮಹಿಳಾ ಘಟಕದ ಅಧ್ಯಕ್ಷ ಶಾಂತಿ ಮಾತನಾಡಿ, ಪ್ರಕರಣದಲ್ಲಿ ನಮ್ಮನ್ನು ಮಧ್ಯ ಎಳೆಯಲಾಗಿದೆ. ಪ್ರಕರಣದ ಗಂಭೀರತೆ ಕುರಿತು ವೈಯಕ್ತಿಕ ದ್ವೇಷಗಳಿಂದ ಈ ರೀತಿ ಹಿಂಸೆ ನೀಡಲಾಗುತ್ತಿದೆ. ನಮ್ಮ ಸಂಘದ ಹೆಸರನ್ನು ವೈಯಕ್ತಿಕವಾಗಿ ಯಾರು ಕೂಡ ಬಳಸಿಕೊಳ್ಳುವುದನ್ನು ಬಿಟ್ಟು ಸಮಾಜದ ಹಿತಕ್ಕಾಗಿ ರೈತರ ಹಿತಕ್ಕಾಗಿ ನಾವೆಲ್ಲರೂ ಒಟ್ಟಾಗಿ ಹೋರಾಡಬೇಕಾಗಿದೆ. ಇಂತಹ ದಿನಮಾನಗಳಲ್ಲಿ ರೈತರ ಪರವಾಗಿರುವ ನಮ್ಮ ಮೇಲೆ ಸುಳ್ಳು ಪ್ರಕರಣ ದಾಖಲಾಗಿದೆ. ಇದು ಸತ್ಯಕ್ಕೆ ದೂರವಾದ ಸಂಗತಿಯಾಗಿದೆ ಎಂದರು.

ಚಿಕ್ಕಾಟಿ: ₹30ಲಕ್ಷ ವೆಚ್ಚದ ಸಿಸಿ ರಸ್ತೆಗೆ ಭೂಮಿ ಪೂಜೆ



ಗುಂಡ್ಲುಪೇಟೆ ತಾಲೂಕಿನ ಚಿಕ್ಕಾಟಿ ಗ್ರಾಮದಲ್ಲಿ 30 ಲಕ್ಷ ವೆಚ್ಚದಲ್ಲಿ ಸಿಸಿ ರಸ್ತೆ ಕಾಮಗಾರಿಗೆ ಶಾಸಕ ಎಚ್.ಎಂ. ಗಣೇಶ್ ಪ್ರಸಾದ್ ಶಂಕುಸ್ಥಾಪನೆ ನೆರವೇರಿಸಿದರು.

• **ಕನ್ನಡಪ್ರಭ ವಾರ್ತೆ** ಗುಂಡ್ಲುಪೇಟೆ

ತಾಲೂಕಿನ ಚಿಕ್ಕಾಟಿ ಗ್ರಾಮದಲ್ಲಿ ಎಸ್‌ಸಿಪಿ ಯೋಜನೆಯಡಿ 30 ಲಕ್ಷ ರು.ವೆಚ್ಚದಲ್ಲಿ ಸಿಸಿ ರಸ್ತೆ ಮತ್ತು ಚರಂಡಿ ಕಾಮಗಾರಿಗೆ ಶಾಸಕ ಎಚ್.ಎಂ. ಗಣೇಶ್ ಪ್ರಸಾದ್ ಭೂಮಿ ಪೂಜೆ ನೆರವೇರಿಸಿದರು.

ಗುರುವಾರ ರಾತ್ರಿ ಶಾಸಕರು ಭೂಮಿ ಪೂಜೆ ಬಳಿಕ ಮಾತನಾಡಿ ಎಸ್‌ಸಿಪಿ ಯೋಜನೆಯಡಿ ಲೋಕೋಪಯೋಗಿ ಇಲಾಖೆಯ ಉಸ್ತುವಾರಿಯಲ್ಲಿ ಕಾಮಗಾರಿ ನಡೆಯಲಿದೆ ಎಂದರು.

ಭೂಮಿ ಪೂಜೆ ಸಮಯದಲ್ಲಿ ಜಿಲ್ಲಾ ಸಹಕಾರ ಒಕ್ಕೂಟದ ಅಧ್ಯಕ್ಷ ಎಚ್.ಎಸ್. ನಂಜುಂಡಪ್ರಸಾದ್, ಜಿಪಂ ಮಾಜಿ ಅಧ್ಯಕ್ಷ ಬಿ.ಎಂ. ಮುನಿರಾಜು, ತಾಪಂ ಮಾಜಿ ಉಪಾಧ್ಯಕ್ಷ ಬಂಗಾರನಾಯಕ, ಗ್ರಾಪಂ ಮಾಜಿ ಅಧ್ಯಕ್ಷ ಜಿ.ಮಹೇಶ್, ಗುತ್ತಿಗೆದಾರ ಎಚ್.ಎನ್. ಬಸವರಾಜು, ಗ್ರಾಮದ ಮುಖಂಡರಾದ ಮಹದೇವಯ್ಯ, ಮರಿಗಂಡಯ್ಯ ಸೇರಿದಂತೆ ಗ್ರಾಮಸ್ಥರು ಇದ್ದರು.

₹82ಲಕ್ಷ ವೆಚ್ಚದ ಹಂಗಳ ಸೆಸ್ಕಾಂ ಶಾಖಾ ಕಚೇರಿ ನಿರ್ಮಾಣಕ್ಕೆ ಶಾಸಕ ಗಣೇಶ್‌ಪ್ರಸಾದ್ ಚಾಲನೆ

• **ಕನ್ನಡಪ್ರಭ ವಾರ್ತೆ** ಗುಂಡ್ಲುಪೇಟೆ

ತಾಲೂಕಿನ ಹಂಗಳ ಗ್ರಾಮದಲ್ಲಿ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತದ ಸೆಸ್ಕಾಂ ಶಾಖಾ ಕಚೇರಿ ಕಟ್ಟಡದ ಕಾಮಗಾರಿಗೆ ಶಾಸಕ ಎಚ್.ಎಂ. ಗಣೇಶ್ ಪ್ರಸಾದ್ ಭೂಮಿ ಪೂಜೆ ನೆರವೇರಿಸಿದರು.

ಹಂಗಳ-ದೇವರಹಳ್ಳಿ ರಸ್ತೆಯಲ್ಲಿರುವ ಹಂಗಳ ಸೆಸ್ಕಾಂ ಶಾಖಾ ಕಚೇರಿ ಅಂದಾಜು 82 ಲಕ್ಷ ವೆಚ್ಚದಲ್ಲಿ ನಿರ್ಮಾಣವಾಗಲಿದ್ದು, ನಿಗದಿತ ಅವಧಿಯೊಳಗೆ ಕಾಮಗಾರಿ ಮುಗಿಯಲಿದೆ ಎಂದರು.

ಭೂಮಿ ಪೂಜೆ ಸಮಯದಲ್ಲಿ ಕಾಡ ಮಾಜಿ ಅಧ್ಯಕ್ಷ ಎಚ್.ಎಸ್. ನಂಜಪ್ಪ, ಜಿಲ್ಲಾ ಸಹಕಾರ ಒಕ್ಕೂಟದ ಅಧ್ಯಕ್ಷ ಎಚ್.ಎಸ್. ನಂಜುಂಡಪ್ರಸಾದ್, ಎಪಿಎಂಸಿ ಅಧ್ಯಕ್ಷ ಆರ್.ಎಸ್. ನಾಗರಾಜು, ಗ್ರಾಪಂ ಮಾಜಿ ಅಧ್ಯಕ್ಷ ದೇವರಹಳ್ಳಿ ಪ್ರಭು, ಹಾಪ್ ಕಾಮ್ಸ್ ಮಾಜಿ ಅಧ್ಯಕ್ಷ ಶಿವಕುಮಾರ್, ಗ್ರಾಪಂ ಮಾಜಿ ಸದಸ್ಯ ವೃಷಬೇಂದ್ರ ಸೇರಿದಂತೆ ಗ್ರಾಮಸ್ಥರು ಇದ್ದರು.



ಗುಂಡ್ಲುಪೇಟೆ ತಾಲೂಕಿನ ಹಂಗಳ ಸೆಸ್ಕಾಂ ಶಾಖಾ ಕಚೇರಿಗೆ ಶಾಸಕ ಎಚ್.ಎಂ. ಗಣೇಶ್ ಪ್ರಸಾದ್ ಭೂಮಿ ಪೂಜೆ ನೆರವೇರಿಸಿದರು.